# ಕರಾವಳಿ ತರಂಗಿಣಿ


ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**
ಪ್ರತಿಯೊಬ್ಬನು ನಡೆಯುವ
ಹಾದಿಯಲ್ಲಿ ಭಯ, ಭಕ್ತಿ,
ಶ್ರದ್ಧೆಯೊಂದಿದ್ದರೆ, ಸಿಗುವುದು
ಸ್ವರ್ಗ ಸುಖದ ಸನ್ಮಾರ್ಗ..
ಸುಳ್ಳು ವಂಚನೆ ಮೋಸದಿಂದ
ಹೊರಬಂದು ಪರರಿಗಾಗಿ ತನ್ನನ್ನು
ಅರ್ಪಿಸಿಕೊಂಡರೆ, ಸಿಗುವುದು
ಮುಕ್ತಿ ಮಾರ್ಗದ ಸುಯೋಗ..
**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 12-12-2025 to 18-12-2025 ಬೆಲೆ:10-00 ಸಂಪುಟ–1 ಸಂಚಿಕೆ–11 ಪುಟಗಳು–6









**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಲಾ ಮಕ್ಕಳಲ್ಲಿ ಚಿಕನ್ ಪಾಕ್ಸ್ ಪ್ರಕರಣಗಳು ದಾಖಲಾಗುತ್ತಿದ್ದು, ಖಾಯಿಲೆಯ ಲಕ್ಷಣಗಳು ಕಂಡುಬಂದಲ್ಲಿ ತಕ್ಷಣಕ್ಕೆ ಚಿಕಿತ್ಸೆಯನ್ನು ಪಡೆಯುವುದರೊಂದಿಗೆ ಸೋಂಕು ಹರಡದಂತೆ ಕ್ರಮವಹಿಸಬೇಕು. ಇದೊಂದು ತೀವ್ರವಾದ ಸಾಂಕ್ರಾಮಿಕ ರೋಗವಾಗಿದ್ದು, ವರಿಸೆಲ್ಲಾ ಜೋಸ್ಟರ್ ವೈರಸ್‌ನಿಂದ ಉಂಟಾಗುತ್ತದೆ. ಚಿಕನ್ ಪಾಕ್ಸ್‌ನಿಂದ ಚರ್ಮದ ಮೇಲಿನ ಗುಳ್ಳೆಗಳು ನೋವನ್ನು ಉಂಟು ಮಾಡುತ್ತದೆ. ಅದೇ ರೀತಿ ಕೆಮ್ಮು, ಜ್ವರ ಕೂಡ ಕಾಣಿಸಿಕೊಳ್ಳುತ್ತವೆ. ಚಿಕನ್ ಪಾಕ್ಸ್ ಸೋಂಕಿತ ವ್ಯಕ್ತಿಯ ಚರ್ಮ, ಉಸಿರು ಅಥವಾ ಸೀನಿದಾಗ ಬರುವ ದ್ರವದಿಂದ ಇತರರಿಗೆ ಹರಡುತ್ತದೆ. ವರಿಸೆಲ್ಲಾ–ಜೋಸ್ಟರ್ ವೈರಸ್ ದೇಹವನ್ನು ಪ್ರವೇಶಿಸಿದ ಮೇಲೆ 20ರಿಂದ 21ದಿನಗಳ ನಂತರ ಚಿಕನ್ ಪಾಕ್ಸ್ ಲಕ್ಷಣಗಳು ಕಾಣಿಸಿಕೊಳ್ಳುತ್ತವೆ.**

## ಕಾಂಗ್ರೆಸ್ಸಿಗರು ಇನ್ನಾದರೂ ಪಾಠ ಕಲಿಯಲಿ –ಜೋಶಿ



**ಹೊಸದಿಲ್ಲಿ:** ಕಾಂಗ್ರೆಸ್ಸಿಗರು ಇನ್ನಾದರೂ ಪಾಠ ಕಲಿಯಲಿ. ರಾಷ್ಟ್ರೀಯ ಸ್ವಯಂ ಸೇವಕ ಸಂಘ ಯಾವತ್ತೂ ರಾಷ್ಟ್ರೀಯ ಹಿತಕ್ಕಾಗಿ ಇರುವಂತಹ ಒಂದು ಜಾಗೃತ ಸಂಘಟನೆಯೇ ಹೊರತು ಕೋಮುವಾದ ಬಿತ್ತುವುದು ಅದರ ಕೆಲಸವಲ್ಲ. ದೇಶವನ್ನು ಜಾಗೃತಗೊಳಿಸುವುದೇ ಅದರ ಧ್ಯೇಯ ಮತ್ತು ಶಕ್ತಿ ಎಂಬುದನ್ನು ಅರಿತುಕೊಳ್ಳಲಿ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಕಾಂಗ್ರೆಸ್ ನಾಯಕರಿಗೆ ತಿರುಗೇಟು ನೀಡಿದ್ದಾರೆ. ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, ಆರೆಸ್ಸೆಸ್ ಶಬ್ದ ಕೇಳಿದರೆ ಸಾಕು ಉರಿದು ಬಿಡುತ್ತಿದ್ದ ಕಾಂಗ್ರೆಸ್ಸಿಗರಿಗೆ ಇದೀಗ ಅವರ ಸರಕಾರದಿಂದಲೇ ತಕ್ಕ ಉತ್ತರ ಸಿಕ್ಕಿದೆ. ಕರ್ನಾಟಕ ರಾಜ್ಯದಲ್ಲಿ 518 ಆರೆಸ್ಸೆಸ್ ಪಥಸಂಚಲನ ಕಾರ್ಯಕ್ರಮಗಳು ಅತ್ಯಂತ ಶಿಸ್ತುಬದ್ಧವಾಗಿ ನಡೆದು **3ನೇ ಪುಟಕ್ಕೆ**

## ಬೆಳೆಯ ಜೊತೆ ರೈತರ ಕೈಸುಟ್ಟ ಬೆಳೆ ವಿಮೆ..!



**ಮಂಗಳೂರು:** ಈ ವರ್ಷದ ಮಳೆ ಕರಾವಳಿ ಜಿಲ್ಲೆಯ ರೈತರ ಪಾಲಿಗೆ ಖಳ ನಾಯಕನಂತೆ ಕಾಡಿದ್ದಂತೂ ಸತ್ಯ. ಜಿಲ್ಲೆಯಲ್ಲಿ ಹಲವಾರು ಸಮಸ್ಯೆಗಳ ಬಳಿಕ ವಾಣಿಜ್ಯ ಬೆಳೆಗಳಾದ ಅಡಿಕೆ, ತೆಂಗು ಮತ್ತು ಕರಿ ಮೆಣಸಿನ ಕಡೆ ರೈತರು ಮುಖ ಮಾಡಿ ಹಲವಾರು ದಶಕಗಳೇ ಸಂದಿದೆ. ಇದರ ನಡುವೆ ಕಾಡು ಪ್ರಾಣಿಗಳ ಹಾವಳಿಯ ಜೊತೆಗೆ ಹಳದಿ ರೋಗ, ಎಲೆ ಚುಕ್ಕಿ ರೋಗದಂತಹ ರೋಗಗಳಿಂದ ರೈತರು ಹೈರಾಣಾಗಿದ್ದಾರೆ. ಈ ಮದ್ಯೆ ಹವಾಮಾನ ಆಧರಿತ ಬೆಳೆ ವಿಮೆಯ ಪರಿಹಾರ ಮೊತ್ತ ಸ್ವಲ್ಪವಾದರೂ **3ನೇ ಪುಟಕ್ಕೆ**

## ಬಿಜೆಪಿಗರು ದ್ವೇಷ ಭಾಷಣದ ಪಿತಾಮಹರು: ಡಿ.ಕೆ.ಶಿ



**ಬೆಳಗಾವಿ:** ಜಾತಿ–ಜಾತಿಗಳು, ಧರ್ಮ–ಧರ್ಮಗಳ ಮಧ್ಯೆ ದ್ವೇಷ ಬಿತ್ತುವ, ವೈಯಕ್ತಿಕ ನಿಂದನೆಯ ಪಿತಾಮಹರು ಬಿಜೆಪಿಯವರು. ಹೀಗಾಗಿ 'ದ್ವೇಷ ಭಾಷಣ ಮತ್ತು ದ್ವೇಷ ಅಪರಾಧ ತಡೆ ವಿಧೇಯಕ' ಮಂಡನೆ ಮಾಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, 'ಸಂವಿಧಾನದ ಆಶಯಗಳ ಪ್ರಕಾರ ಬಿಜೆಪಿಯವರು ನಡೆದುಕೊಳ್ಳಲಿ. ಸಂವಿಧಾನಕ್ಕೆ ಗೌರವ ಕೊಡುವ ಇಚ್ಛೆ ಅವರಿಗಿದ್ದರೆ, ಅದನ್ನು ಪಾಲಿಸಲಿ. ದ್ವೇಷ ಭಾಷಣ ಮಾಡದೇ **3ನೇ ಪುಟಕ್ಕೆ**






## ಕಾಂಗ್ರೆಸ್ಸಿಗರು ಇನ್ನಾದರೂ ಪಾಠಕಲಿಯಲಿ-ಜೋಶಿ

**ಒಂದನೇ ಪುಟದಿಂದ......**

ಯಶಸ್ವಿಗೊಂಡಿವೆ. ಕಾಂಗ್ರೆಸ್ಸಿಗರು ಮಾಡಿದ ಅಪಪ್ರಚಾರಕ್ಕೆ ಇದು ತಕ್ಕ ಉತ್ತರವಾಗಿದೆ ಎಂದು ಹೇಳಿದರು. ರಾಷ್ಟ್ರೀಯ ಸ್ವಯಂ ಸೇವಕರ ಸಂಘದ ಪಥಸಂಚಲನಕ್ಕೆ ಅವಕಾಶ ಕೊಟ್ಟರೆ ಗದ್ದಲ, ಗಲಾಟೆ, ಕೋಮು ಗಲಭೆಗೆ ಕಾರಣವಾಗುತ್ತದೆ ಎಂದು ಕಾಂಗ್ರೆಸ್ ಅಪಪ್ರಚಾರ ಮಾಡುತ್ತಲೇ ಇತ್ತು. ಆದರೆ, ರಾಜ್ಯದಲ್ಲಿ ಇಷ್ಟೊಂದು ಪ್ರಮಾಣದಲ್ಲಿ ಪಥಸಂಚಲನ ನಡೆಸಿದ್ದರೂ ಅಂತಹ ಯಾವುದೇ ಅಹಿತಕರ ವಾತಾವರಣ ಉಂಟಾಗಿಲ್ಲ. ಸಂಘದ ಹೆಸರು ಕೇಳಿದರೆ ಸಾಕು ಕಾಂಗ್ರೆಸ್‌ಗೆ ಮೈ ಉರಿ ಯುತ್ತದೆ. ಇಂತಹವರಿಗೆ ಇದೀಗ ಕಾಂಗ್ರೆಸ್ ಸರಕಾರವೇ ತಕ್ಕ ಉತ್ತರ ನೀಡಿದೆ ಎಂದರು. ಕಾಂಗ್ರೆಸ್ ನಾಯಕರ ಅಪಪ್ರಚಾರದ ನಡುವೆ ಯೂ ಧೃತಿಗೆಡದೆ ರಾಜ್ಯದಲ್ಲಿ ಬರೋಬ್ಬರಿ 518 ರಾಷ್ಟ್ರೀಯ ಪಥಸಂಚಲನ ಕಾರ್ಯಕ್ರಮಗಳನ್ನು ನಡೆಸಿದೆ. ಸಂಘವು ಶಿಸ್ತಿಗೆ ಪ್ರತೀಕವಾಗಿದೆ ಮತ್ತು 'ದೇಶ ಮೊದಲು, ದೇಶ ಸೇವೆಯೇ ಪರಮೋಚ್ಚ' ಎಂಬ ಆರೆಸ್ಸೆಸ್ ಸಿದ್ಧಾಂತವನ್ನು ಬಲವಾಗಿ ಪ್ರತಿಪಾದಿಸಿದೆ ಎಂದಿದ್ದಾರೆ.

## ಬಿಜೆಪಿಗರು ದ್ವೇಷ ಭಾಷಣದ ಪಿತಾಮಹರು: ಡಿ.ಕೆ.ಶಿ

**ಒಂದನೇ ಪುಟದಿಂದ......**

ಹೋದರೆ ಯಾವುದೇ ಸಮಸ್ಯೆಯೇ ಇರುವುದಿಲ್ಲ. ಸಂವಿಧಾನದರಕ್ಷಣೆಗೆ ನಾವು ಈ ವಿಧೇಯಕವನ್ನು ಮಂಡಿಸುವ ಮೂಲಕ ಕ್ರಮ ಕೈಗೊಂಡಿದ್ದೇವೆ ಎಂದು ತಿಳಿಸಿದರು. ನಾಯಕತ್ವ ವಿಚಾರವಾಗಿ ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಉತ್ತರ ನೀಡುತ್ತಾರೆ ಎಂದ ಅವರು, ಬ್ಯಾಲೆಟ್ ಪತ್ರದ ಮೂಲಕ ಚುನಾವಣೆ ನಡೆಯುತ್ತಿದ್ದ ವೇಳೆ ಯಾವುದೇ ಮತಗಳ್ಳತನ ಆಗುತ್ತಿರಲಿಲ್ಲ. ಅಮಿತ್ ಶಾ ಅವರು ಈ ಬಗ್ಗೆ ಕನಿಷ್ಟಜ್ಞಾನ ಹೊಂದಿರಬೇಕು. ಅವರಕಾಲದಲ್ಲಿ ಬ್ಯಾಲೆಟ್ ಪೇಪರ್ ಬಳಸಲಾಗುತ್ತಿತ್ತು. ಹೀಗಿರುವಾಗ ಮತ ಕಳ್ಳತನ ಹೇಗೆ ಸಾಧ್ಯ? ಎಂದು ಪ್ರಶ್ನಿಸಿದರು.

## ಬೆಳೆಯ ಜೊತೆ ರೈತರ ಕೈಸುಟ್ಟ ಬೆಳೆ ವಿಮೆ..!

**ಒಂದನೇ ಪುಟದಿಂದ......**

ಗಾಯಕ್ಕೆ ಮುಲಾಮು ಹಚ್ಚಿದಂತಾಗಬಹುದು ಎಂಬ ನಿರೀಕ್ಷೆಯಲ್ಲಿದ್ದ ರೈತರಿಗೆ ಬೆಳೆ ವಿಮೆಯೂ ಕೈ ಸುಟ್ಟಿದೆ. ಯೋಜನೆ ಆರಂಭದ ವರ್ಷದಲ್ಲಿ ವಿಮೆ ಕಟ್ಟಿದಕೃಷಿಕರಿಗೆ ಭಾರೀ ಪ್ರಮಾಣದ ಪರಿಹಾರ ಸಿಕ್ಕಿತ್ತು. ರೈತರೊಬ್ಬರಿಗೆ 20 ಲಕ್ಷರೂ. ಜಮೆ ಆಗಿ ಭಾರೀ ಸುದ್ದಿಯಾಗಿದ್ದರ ಪರಿಣಾಮ ಎರಡನೇ ವರ್ಷದಲ್ಲಿ ವಿಮೆ ಕಟ್ಟಿದ ರೈತರ ಸಂಖ್ಯೆ. ದಾಖಲೆಯ ಮಟ್ಟದಲ್ಲಿ ಹೆಚ್ಚಾಗಿತ್ತು. ಆದರೆ ವಿಮೆ ಕಟ್ಟುವವರ ಸಂಖ್ಯೆ ಹೆಚ್ಚಾಗುತ್ತಿರುವಂತೆ ಕಂಪೆನಿಯು ಪರಿಹಾರ ಮೊತ್ತದ ಪ್ರಮಾಣವನ್ನೂ ವರ್ಷದಿಂದ ವರ್ಷಕ್ಕೆ ಇಳಿಸುತ್ತಾ ಬರುತ್ತಿದೆ ಎನ್ನುವುದು ರೈತರ ಅಳಲು. ಈ ವರ್ಷ ರೈತನಿಗೆ ಆದ ನಷ್ಟ ಕಳೆದ ಐದಾರು ವರ್ಷಗಳಲ್ಲಿ ಆಗಿಲ್ಲ ಎನ್ನಲಾಗುತ್ತಿದೆ. ಮೇಘಸ್ಫೋಟ ಸಂಭವಿಸಿದ 72 ಗಂಟೆಯೊಳಗೆ ವಿಮಾ ಸಂಸ್ಥೆಗೆ ಅಥವಾ ಹಣಕಾಸಿನ ಸಂಸ್ಥೆಗೆ ಲಿಖಿತ ವರದಿ ಕೊಡಬೇಕು. ಇಂತಹ ಸಂದರ್ಭದಲ್ಲಿ ವ್ಯಕ್ತಿಗತ ಪರಿಹಾರ ನೀಡಬಹುದು. 2016ರಲ್ಲಿ ಆರಂಭವಾದ ಈ ಯೋಜನೆರೈತರಿಗೆಈವರೆಗೆ ವರದಾನವಾಗಿತ್ತು.

## ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

ಮಂಗಳೂರು – ಪರಿಶಿಷ್ಟ ಜಾತಿಗೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ದಕ್ಷಿಣ ಕನ್ನಡ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಲ್ಲಿ ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ನಗರದ ನೆಹರು ಮೈದಾನದ ಎದುರು ಇರುವ ಪಿಡಬ್ಲ್ಯೂಡಿ ಕಟ್ಟಡದ 2ನೇ ಮಹಡಿಯಲ್ಲಿರುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ (ದೂರವಾಣಿ ಸಂಖ್ಯೆ 9886068357) ಸಂಪರ್ಕಿಸುವಂತೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇರಳ ಚುನಾವಣೆ: ಮದ್ಯದಂಗಡಿ ಮುಚ್ಚಲು ಆದೇಶ

ಮಂಗಳೂರು – ಕೇರಳ ರಾಜ್ಯದ ಸ್ಥಳೀಯ ಸಂಸ್ಥೆಗಳಿಗೆ ಡಿ. 11ರಂದು ಚುನಾವಣೆ ಮತ್ತು ಡಿ. 13ರಂದು ಮತ ಎಣಿಕೆ ನಿಗದಿಯಾಗಿರುವ ಹಿನ್ನೆಲೆಯಲ್ಲಿ ಕೇರಳ ರಾಜ್ಯದ ಗಡಿಗೆ ಹೊಂದಿಕೊಂಡಿರುವ ಕರ್ನಾಟಕ ರಾಜ್ಯದ ಪ್ರದೇಶಗಳಲ್ಲಿ ಮತದಾನ ಮತ್ತು ಮತ ಎಣಿಕೆಯ ದಿನಗಳಂದು 3 ಕಿ.ಮೀ. ವ್ಯಾಪ್ತಿಯ ಗಡಿ ಭಾಗಗಳಲ್ಲಿ "ಶುಷ್ಕದಿನ" ಘೋಷಿಸಲಾಗಿದೆ.

## ಪ್ರೋತ್ಸಾಹ ಧನಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನ

ಶಿವಮೊಗ್ಗ : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಚೇತನ ಯೋಜನೆ, ಲಿಂಗತ್ವ ಅಲ್ಪ ಸಂಖ್ಯಾತರ ಪುನರ್ವಸತಿ ಯೋಜನೆ, ಧನಶ್ರೀ ಯೋಜನೆಯ ಪ್ರೋತ್ಸಾಹಧನಕ್ಕಾಗಿ ಹಾಗೂ ಉದ್ಯೋಗಿನಿ ಯೋಜನೆಯ ಸಹಾಯಧನಕ್ಕಾಗಿ ಆಸಕ್ತರಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ದೂರವಾಣಿ ಸಂಖ್ಯೆ: 08182 – 295514ನ್ನು ಸಂಪರ್ಕಿಸುವುದು.

## ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಭತ್ತ ಖರೀದಿ

ಶಿವಮೊಗ್ಗ:2025-26ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಕೇಂದ್ರ ಸರ್ಕಾರ ನಿಗದಿಪಡಿಸಿದ ಬೆಲೆಯಂತೆ ರೈತರಿಂದ ಭತ್ತವನ್ನು ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ಗುರುದತ್ತ ಹೆಗಡೆ ತಿಳಿಸಿದ್ದಾರೆ. ರೈತರು ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ ಫ್ರೂಟ್ಸ್ ಐಡಿಯೊಂದಿಗೆ ಖರೀದಿ ಕೇಂದ್ರಗಳಲ್ಲಿ ದಿ:31-12-2025ರವರೆಗೆ ಭತ್ತವನ್ನು ನೊಂದಾಯಿಸಿಕೊಳ್ಳಬಹುದು. ಹಾಗೂ ದಿ:28-02-2026ರ ಅವಧಿಯವರೆಗೆ ರೈತರಿಂದ ಭತ್ತವನ್ನು ಖರೀದಿ ಮಾಡಲಾಗುವುದು. ರೈತ ಬಾಂಧವರು ಈ ಯೋಜನೆಯ ಸದುಪಯೋಗ ಪಡೆಯಬೇಕೆಂದು ತಿಳಿಸಿದ್ದಾರೆ.

## ತರಬೇತಿ ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನ

ಮಡಿಕೇರಿ – ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರ ಬೆಂಗಳೂರು, ಜಿಲ್ಲಾ ಕೈಗಾರಿಕಾ ಕೇಂದ್ರ ಮಡಿಕೇರಿ ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ಧಾರವಾಡ ಇವರ ಸಂಯುಕ್ತ ಆಶ್ರಯದಲ್ಲಿ ಕೊಡಗು ಜಿಲ್ಲೆಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಬಯಸುವ 'ಯುವನಿಧಿ' ಯೋಜನೆಯಡಿಯಲ್ಲಿ ನೋಂದಾಯಿಸಿರುವ ಆಸಕ್ತ ಯುವನಿಧಿ ಫಲಾನುಭವಿಗಳಿಗೆ ಎರಡು ವಾರಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ.

## ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಡಿಕೇರಿ-ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಕೊಡಗು ಇವರ ವತಿಯಿಂದ 2025-26ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ್, ಪಾರ್ಸಿ ಜನಾಂಗದವರಿಗೆ ಅರಿವು (ರಿನಿವಲ್) ಯೋಜನೆಯಡಿ ಸಾಲ ಸೌಲಭ್ಯ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿ ಪಡೆಯಲು ಈ ಕಚೇರಿಯ ದೂರವಾಣಿ ಸಂಖ್ಯೆ 08272-201449 ನ್ನು ಸಂಪರ್ಕಿಸಬಹುದು.

## ಸಿ.ಎನ್.ಜಿ. ಸಮಸ್ಯೆಗೆ ಶೀಘ್ರದಲ್ಲೇ ಪರಿಹಾರ



ಉಡುಪಿ : 2034ರ ವೇಳೆಗೆ, ದೇಶದಾದ್ಯಂತ 18,336 ಸಿಎನ್‌ಜಿ ಕೇಂದ್ರಗಳನ್ನು ಸ್ಥಾಪಿಸುವ ಗುರಿ ಹೊಂದಿದ್ದು, ಸೆ.30ರವರೆಗೆ ಒಟ್ಟು 8,357 ಸಿಎನ್‌ಜಿ ಕೇಂದ್ರಗಳನ್ನು ದೇಶಾದ್ಯಂತ ಸ್ಥಾಪಿಸಿ ಗುರಿ ಮೀರಿದ ಸಾಧನೆ ಮಾಡಲಾಗಿದೆ ಎಂದು ಕೇಂದ್ರದ ಪೆಟ್ರೋಲಿಯಂ ಖಾತೆಯ ರಾಜ್ಯ ಸಚಿವ ಚಿತ್ರನಟ ಸುರೇಶ್ ಗೋಪಿ, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸದಸ್ಯ ಕೋಟ ಶ್ರೀನಿವಾಸ ಪೂಜಾರಿ ಅವರು ಕೇಳಿದ ಲಿಖಿತ ಪ್ರಶ್ನೆಗೆ ಉತ್ತರಿಸಿದ್ದಾರೆ. 2025ರ ಸೆ.30 ರವರೆಗೆ ಒಟ್ಟು 5,826 ಸಿಎನ್‌ಜಿ ಕೇಂದ್ರಗಳನ್ನು ಸ್ಥಾಪಿಸುವ ಗುರಿಗೆ ವಿರುದ್ಧವಾಗಿ 8,357 ಸಿಎನ್‌ಜಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಸಿಎನ್‌ಜಿ ಬೇಡಿಕೆ ಮತ್ತು ಈ ನೈಸರ್ಗಿಕ ಅನಿಲದ ಲಭ್ಯತೆಯ ಮೇರೆಗೆ ಹೆಚ್ಚಿನ ಸಿಎನ್‌ಜಿ ಮಾರಾಟ ಕೇಂದ್ರಗಳನ್ನು ತೆರೆಯಲಾಗುತ್ತಿದೆ. ಈಗಿರುವ ಸಿಎನ್‌ಜಿ ಮಾರಾಟ ಕೇಂದ್ರಗಳನ್ನು ಆನ್ಲೈನ್ ಸ್ಟೇಶನ್‌ಗಳಾಗಿ ಮೇಲ್ದರ್ಜೆಗೇರಿಸಲು ಈಗಾಗಲೇ ಸಿಜಿಡಿ (ಸಿಟಿ ಗ್ಯಾಸ್ ಡಿಸ್ಟ್ರಿಬ್ಯೂಟರ್) ಘಟಕಗಳಿಗೆ ಸೂಚನೆ ನೀಡಲಾಗಿದೆ ಎಂದು ಮಾಲಿವುಡ್ ನಟ ಸುರೇಶ್ ಗೋಪಿ ಹೇಳಿದ್ದಾರೆ. ಇದರಿಂದ ವಾಹನಗಳಿಗೆ ವೇಗವಾಗಿ ಇಂಧನವನ್ನು ತುಂಬಿಸಲು ಸಹಾಯವಾಗುತ್ತದೆ. ಸಿಎನ್‌ಜಿ ತಾಂತ್ರಿಕತೆ ತೊಂದರೆ ಮತ್ತು ಗೊಂದಲವಿದ್ದರೆ ಪ್ರಗತಿ ಪರಿಶೀಲನಾ ಸಭೆ ನಡೆಸಲು ಸಹ ಆದೇಶ ನೀಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

## ಕೆನರಾ ಎಂಜಿನಿಯರಿಂಗ್ ಕಾಲೇಜು 'ಟೆಕ್ನೋವಾ 2025'




ಮಂಗಳೂರು: ಕೆನರಾ ಎಂಜಿನಿಯರಿಂಗ್ ಕಾಲೇಜ್ (CEC) ಬೆಂಜನಪದವು ಇದರ ಆಯೋಜನೆಯಲ್ಲಿ ಪ್ರಥಮ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಅಂತರ ಕಾಲೇಜು ವಿಜ್ಞಾನ ಉತ್ಸವ 'ಟೆಕ್ನೋವಾ 2025' ಯಶಸ್ವಿಯಾಗಿ ನಡೆಯಿತು. ವಿವಿಧ ಪಿಯು ಕಾಲೇಜುಗಳಿಂದ 800 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಏಕದಿನ ಉತ್ಸವದಲ್ಲಿ ನವೀನತೆ, ಸೃಜನಶೀಲತೆ ಹಾಗೂ ಪ್ರಾಯೋಗಿಕ ಕಲಿಕೆಗೆ ಪ್ರಾಶಸ್ತ್ಯ ನೀಡುವ ವಿವಿಧ ಸ್ಪರ್ಧೆಗಳು, ಕಾರ್ಯಾಗಾರಗಳು ಮತ್ತು ಕ್ಯಾಂಪಸ್ ಚಟುವಟಿಕೆಗಳಲ್ಲಿ ಉತ್ಸಾಹದಿಂದ ಭಾಗವಹಿಸಿದರು. ಕೆನರಾ ಪದವಿಪೂರ್ವ ಕಾಲೇಜ್, ಶಾರದಾ ಪಿಯು ಕಾಲೇಜ್ ಮತ್ತು ಕಾರ್ಮೆಲ್ ಕಾಂಪೊಸಿಟ್ ಪಿಯು ಕಾಲೇಜ್ ಮೊಡಂಕಾಪು ಇಲ್ಲಿಯ ಉಪನ್ಯಾಸಕ ಪ್ರತಿನಿಧಿಗಳು ಡಿಜಿಟಲ್ ಬಟನ್ ಕ್ಲಿಕ್ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕೆನರಾ ಹೈಸ್ಕೂಲ್ ಅಸೋಸಿಯೇಶನ್‌ನ ಮಾನ್ಯ ಕಾರ್ಯದರ್ಶಿ ಶ್ರೀ ಎಂ. ರಂಗನಾಥ ಭಟ್ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಾ ವಿದ್ಯಾರ್ಥಿಗಳು ತಮ್ಮ ಭವಿಷ್ಯಕ್ಕಾಗಿ ಸೂಕ್ತವಾದ ಉದ್ಯೋಗ, ವಿದ್ಯಾಭ್ಯಾಸದ ಆಯ್ಕೆ ಮಾಡಿಕೊಳ್ಳುವಂತೆ ಅವರು ಪ್ರೇರೇಪಿಸಿದರು.

## ಜಿಲ್ಲೆಯಲ್ಲಿ ಚಿಕನ್ ಪಾಕ್ಸ್ ಪ್ರಕರಣ ಪತ್ತೆ...!



ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಚಿಕನ್ ಪಾಕ್ಸ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಶಾಲಾ ಮಕ್ಕಳಲ್ಲಿ ಕೆಲವೊಂದು ಪ್ರಕರಣಗಳು ದಾಖಲಾಗುತ್ತಿದ್ದು, ಸ್ಥಳೀಯವಾಗಿ ಹರಡುದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಅಳವಡಿಸುವುದು ಅತೀ ಅಗತ್ಯವಾಗಿರುತ್ತದೆ. ಶಾಲಾ ಮಕ್ಕಳಲ್ಲಿ ಅಥವಾ ಸಾರ್ವಜನಿಕರಲ್ಲಿ ಖಾಯಿಲೆಯ ಲಕ್ಷಣಗಳು ಕಂಡುಬಂದಲ್ಲಿ ತಕ್ಷಣಕ್ಕೆ ಚಿಕಿತ್ಸೆಯನ್ನು ಪಡೆಯುವುದರೊಂದಿಗೆ ಸೋಂಕು ಹರಡದಂತೆ ಕ್ರಮವಹಿಸಬೇಕು. ಚಿಕನ್ ಪಾಕ್ಸ್ ಮಕ್ಕಳಲ್ಲಿ, ಯಾವುದೇ ತೊಂದರೆ ಇಲ್ಲದೆ ಸಂಪೂರ್ಣವಾಗಿ ಗುಣವಾಗುತ್ತದೆ. ಒಮ್ಮೆ ಚಿಕನ್ ಪಾಕ್ಸ್‌ನಿಂದ ಬಳಲಿದ ವ್ಯಕ್ತಿ ಜೀವಿತಾವಧಿಯವರೆಗೂ ಅದರ ವಿರುದ್ಧ ರೋಗ ನಿರೋಧಕ ಶಕ್ತಿಯನ್ನು ಹೊಂದುತ್ತಾನೆ. ಪೌಷ್ಠಿಕ ಆಹಾರ ಸೇವನೆಯಿಂದ ದೇಹದ ರೋಗ ನಿರೋಧಕ ವ್ಯವಸ್ಥೆಯನ್ನು ಸದೃಢಗೊಳಿಸಿಕೊಳ್ಳುವುದೂ ರೋಗ ನಿಯಂತ್ರಣದಲ್ಲಿ ಮುಖ್ಯ ಪಾತ್ರವನ್ನು ವಹಿಸುತ್ತದೆ. ಅನಾರೋಗ್ಯವಿದ್ದರೆ ಹತ್ತಿರದ ಸರ್ಕಾರಿ ಆಸ್ಪತ್ರೆಗಳಲ್ಲಿ ಪರೀಕ್ಷಿಸಿಕೊಳ್ಳಬೇಕು ಹಾಗೂ ವೈದ್ಯರನ್ನು ಸಂಪರ್ಕಿಸದೇ ಔಷಧವನ್ನು ತೆಗೆದುಕೊಳ್ಳಬಾರದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ. ಬಿ. ಆರ್ ಅಂಬೇಡ್ಕರ್ ಮಹಾ ಪರಿನಿರ್ವಾಣ ದಿನಾಚರಣೆ



ಮಂಗಳೂರು:ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ. ಆರ್ ಅಂಬೇಡ್ಕರ್ ಅವರ ಮಹಾ ಪರಿನಿರ್ವಾಣ ದಿನದಂದು ಬಿಜೆಪಿ ಮಂಗಳೂರು ನಗರದ ದಕ್ಷಿಣ ಮಂಡಲದ ಎಸ್ಸಿ ಮೋರ್ಚಾ ವತಿಯಿಂದ ಕುದ್ಮುಲ್ ರಂಗರಾವ್ ಪುರಭವನದ ಮುಂಭಾಗದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಗೌರವಪೂರ್ವಕ ಪುಷ್ಪ ನಮನಗಳನ್ನು ಸಲ್ಲಿಸಲಾಯಿ ತು. ಈ ವೇಳೆ ಮಾತನಾಡಿದ ಶಾಸಕ ವೇದವ್ಯಾಸ ಕಾಮತ್‌ರವರು, ಬಾಬಾಸಾಹೇಬರು ಕೇವಲ ದಲಿತರ ಪರ ಹೋರಾಟಗಾರ ಅಲ್ಲ. ಈ ದೇಶದ ಪ್ರತಿಯೊಬ್ಬ ಅಸಹಾಯಕನ ಶೋಷಿತನ ಪರವಾಗಿ ಮಿಡಿದ ಮಹಾ ಮಾನವತಾವಾದಿ ಅವರು. ಅಂತಹ ಶ್ರೇಷ್ಠ ವ್ಯಕ್ತಿ ಯನ್ನು ಕಾಂಗ್ರೆಸ್ ಚುನಾವ ಣೆಯಲ್ಲಿ ಹೀನಾಯವಾಗಿ ಸೋಲುವಂತೆ ಮಾಡಿದ್ದು ಈ ದೇಶದ ದುರಂತ. ಬಾಬಾ ಬಾಬಾ ಸಾಹೇಬರು ನಮಗೆ ನೀಡಿದ ಸರ್ವ ಶ್ರೇಷ್ಠ ಸಂವಿಧಾನದ ಹಾದಿಯಲ್ಲಿ ನಾವೆಲ್ಲರೂ ನಡೆಯೋಣ ಎಂದರು. ಜಿಲ್ಲಾಧ್ಯಕ್ಷರಾದ ಸತೀಶ್ ಕುಂಪಲರವರು ಮಾತನಾಡಿ ಮಹಾ ಮಾನವತಾವಾದಿ ಅಂಬೇಡ್ಕರ್ ಅವರ ಸಂವಿಧಾನದ ಆಶಯಕ್ಕೆ ತಕ್ಕಂತೆ ನಡೆದುಕೊಂಡರೆ ಅದುವೇ ಅವರಿಗೆ ನಾವು ನೀಡುವ ಶ್ರೇಷ್ಠ ಗೌರವ ಎಂದರು.

## ಎಂ.ಸಿ.ಸಿ. ಬ್ಯಾಂಕಿನ ನವೀಕೃತ ಕಂಕನಾಡಿ ಶಾಖೆ ಉದ್ಘಾಟನೆ



ಮಂಗಳೂರು : ಎಂಸಿಸಿ ಬ್ಯಾಂಕ್, ಮಂಗಳೂರು ಇದರ ನವೀಕೃತ ಕಂಕನಾಡಿ ಶಾಖೆಯನ್ನು ಪಂಪ್‌ವೆಲ್ ರಸ್ತೆಯಲ್ಲಿರುವ ಎಂಪೋರಿಯ ವಾಣಿಜ್ಯ ಸಂಕೀರ್ಣದಲ್ಲಿ ಉದ್ಘಾಟಿಸಲಾಯಿತು. ನವೀಕರಿಸಿದ ಶಾಖೆಯನ್ನು ಹೆಸರಾಂತ ಅನಿವಾಸಿ ಭಾರತೀಯ ಉದ್ಯಮಿ, ಉದಾರ ದಾನಿ ಮತ್ತು ವಿಷನ್ ಕೊಂಕಣಿಯ ಪ್ರವರ್ತಕ ಶ್ರೀ ಮೈಕಲ್ ಡಿಸೋಜಾ ಉದ್ಘಾಟಿಸಿ, ಕಂಕನಾಡಿ ಫಾದರ್ ಮುಲ್ಲರ್ಸ್ ಚಾರಿಟೇಬಲ್ ಸಂಸ್ಥೆಗಳ ನಿರ್ದೇಶಕ ಫಾದರ್ ಫೌಸ್ಟಿನ್ ಲೋಬೊ ಆಶೀರ್ವದಿಸಿದರು. ಎಂಸಿಸಿ ಬ್ಯಾಂಕ್‌ನ ಅಧ್ಯಕ್ಷ ಸಹಕಾರ ರತ್ನ ಶ್ರೀ ಅನಿಲ್ ಲೋಬೊ ಅಧ್ಯಕ್ಷತೆ ವಹಿಸಿದ್ದರು. ಜೆಪ್ಪುವಿನ ಸೇಂಟ್ ಆಂಟನಿ ಆಶ್ರಮದ ನಿರ್ದೇಶಕ ವಂದನೀಯ ಫಾದರ್ ಜೆ.ಬಿ.ಕ್ರಾಸ್ತಾ, ಬೆಂದೂರಿನ ಸೇವಾನಿಲಯ ಕಾನ್ವೆಂಟ್‌ನ ಸುಪೀರಿಯರ್‌ನ ಸಿಸ್ಟರ್ ಸಿಂತಿಯಾ ಡಿಸೋಜಾ, ಮತ್ತು ಕೊಂಕಣಿ ಸಾಂಸ್ಕೃತಿಕ ಸಂಸ್ಥೆ (ಕೆಸಿಒ) ಅಧ್ಯಕ್ಷ ಶ್ರೀ ಲಿಯೋ ರೋಡ್ರಿಗಸ್, ಮುಖ್ಯ ಅತಿಥಿಗಳಾಗಿದ್ದರು. ಅಧ್ಯಕ್ಷರಾದ ಶ್ರೀ ಅನಿಲ್ ಲೋಬೊ ಅವರು ಕಂಕನಾಡಿ ಶಾಖೆಯ ನವೀಕರಣದ ಹಿಂದಿನ ಉದ್ದೇಶ ಮತ್ತು ದೃಷ್ಟಿಕೋನವನ್ನು ವಿವರಿಸಿದರು.

## ಎಸ್.ಡಿ.ಎಂ ಪ್ರಕೃತಿ ಚಿಕಿತ್ಸಾ ಕಾಲೇಜಿನಲ್ಲಿ ಶಿಶ್ಯೋಪನಯನ



ಉಜಿರೆ : ಶಿಕ್ಷಣ ಎಂಬುವುದು ಕೇವಲ ಪುಸ್ತಕ ದ ಪಠ್ಯವಲ್ಲ, ಅದು ನಮ್ಮ ಬದುಕನ್ನು ಶಿಸ್ತು ಬದ್ಧ, ನೀತಿ ಬದ್ಧ, ಕರ್ಮಬದ್ಧ ಮತ್ತು ಸಾಂಸ್ಕೃತಿಕ ಬದ್ಧವಾಗಿ ನಿರೂಪಿಸುವ ಶಕ್ತಿ. ಧಾ ರ್ಮಿಕ ಮಂತ್ರಗಳಲ್ಲಿ ಆದರ್ಶ ಜೀವನ ಮತ್ತು ಯಶಸ್ಸಿನ ಹಾದಿಯನ್ನು ಉಪದೇಶಿಸುವ ಸಾಮರ್ಥ್ಯವಿದೆ. ಆಧ್ಯಾತ್ಮ ಮತ್ತು ಧರ್ಮ ಎಂದರೆ ಆಚರಣೆಯಲ್ಲ, ಅದು ಸಾತ್ವೀಕತೆ ಮತ್ತು ಮಾನವೀಯತೆ ಎಂದು ಬೆಂಗಳೂರಿನ ಆಧ್ಯಾತ್ಮ ಗುರು, ಆಧ್ಯಾತ್ಮ ಯೋಗ ಅಕಾಡೆ ಮಿಯ ಸಂಚಾಲಕ ಡಾ. ಆರ್. ರಂಗನ್ ಅಭಿಪ್ರಾಯ ಪಟ್ಟರು.

## ಎಸ್.ಡಿ.ಎಂ ಆಂಗ್ಲಮಾಧ್ಯಮ ಶಾಲೆಯಲ್ಲಿ ಪ್ರತಿಭಾ ದಿನಾಚರಣೆ



ಧರ್ಮಸ್ಥಳ : ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಂಗ್ಲಮಾಧ್ಯಮ ಶಾಲೆ ಧರ್ಮಸ್ಥಳದಲ್ಲಿ ವಿದ್ಯಾರ್ಥಿಗಳ ಪ್ರತಿಭಾ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮದ ಉದ್ಘಾಟನೆಯನ್ನು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಡಾ. ಸತೀಶ್ಚಂದ್ರ ಎಸ್. ದೀಪ ಬೆಳಗಿಸಿ ಉದ್ಘಾಟಿಸಿ, ಮಾತನಾಡಿ, ಶಾಲಾ ಪ್ರತಿಭಾ ದಿನಾಚರಣೆಯ ಅಗತ್ಯತೆ ಹಾಗೂ ವಿದ್ಯಾರ್ಥಿಗಳು ಅದನ್ನು ಸದುಪಯೋಗಪಡಿಸಿಕೊಳ್ಳುವ ರೀತಿಯನ್ನು ವಿವರಿಸಿ, ಪ್ರತಿಭಾ ದಿನ ವಿದ್ಯಾರ್ಥಿಗಳಿಗೆ ಅವಕಾಶಗಳ ಕಲ್ಪಿಸಿಕೊಡುವ ವೇದಿಕೆ ಎಂದರು. ಇದೇ ಸಂದರ್ಭ ವೇದಿಕೆಯಲ್ಲಿ 2024-25ನೇ ಸಾಲಿನ ಎಸ್.ಎಲ್.ಸಿ ಯಲ್ಲಿ ಅತ್ಯುತ್ತಮ ಸಾಧನೆಗೈದ ವಿದ್ಯಾರ್ಥಿಗಳನ್ನು ಗೌರವಿಸಿ, ರಾಜ್ಯಮಟ್ಟದ ಚೆಸ್ ಪಂದ್ಯಾಟದಲ್ಲಿ ಪ್ರಥಮ ಸ್ಥಾನಗಳಿಸಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ 7ನೇ ತರಗತಿಯ ವಿದ್ಯಾರ್ಥಿ ಸಮರ್ಥ್ ಭಟ್ ಇವರನ್ನು ಎಸ್.ಡಿ.ಎಂ ಶಿಕ್ಷಣ ಸಂಸ್ಥೆಗಳ ವತಿಯಿಂದ ಸನ್ಮಾನಿಸಲಾಯಿತು. ಬಳಿಕ ವಿವಿಧ ವಿಭಾಗಗಳಲ್ಲಿ ಪ್ರಶಸ್ತಿ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

## ಬೆಳೆ ವಿಮೆ: ಸದನ ಗಮನ ಸೆಳೆದ ಕಿಶೋರ್ ಕುಮಾರ್



ಬೆಳಗಾವಿ : ಚಳಿಗಾಲದ ವಿಧಾನ ಪರಿಷತ್ ಅಧಿವೇಶನದ ಶೂನ್ಯವೇಳೆಯ ಸಂದರ್ಭದಲ್ಲಿ, ಉಡುಪಿ-ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳ ವಿಧಾನ ಪರಿಷತ್ ಸದಸ್ಯ ಶ್ರೀ ಕಿಶೋರ್ ಕುಮಾರ್ ಪುತ್ತೂರು ರಾಜ್ಯದ ಕೃಷಿಕರನ್ನು ಗಂಭೀರ ನಿರಾಶೆಯಲ್ಲಿಟ್ಟಿರುವ ಬೆಳೆ ವಿಮೆ ಪರಿಹಾರ ಸಂಬಂಧಿಸಿದ ಸಮಸ್ಯೆಯನ್ನು ಸದನದ ಗಮನಕ್ಕೆ ತಂದರು. ದಿನಪತ್ರಿಕೆಯೊಂದರಲ್ಲಿ ವರದಿಯಾಗಿರುವ ವಿಷಯವನ್ನು ಉಲ್ಲೇಖಿಸಿ, ಪರಿಹಾರದ ಮೊತ್ತವು ರೈತರಿಗೆ ತಲುಪದೇ ಇರುವ ವಾಸ್ತವಿಕ ಸ್ಥಿತಿಯನ್ನು ಕಿಡಿಕಾರಿದ್ದಾರೆ. ರಾಜ್ಯದ ಶೇಕಡಾ 60 ಕ್ಕೂ ಹೆಚ್ಚು ಜನರಿಗೆ ಉದ್ಯೋಗ ನೀಡುತ್ತಿರುವ ಕೃಷಿ ವಲಯವು ಈ ಬಾರಿ ಅತಿಯಾದ ಮಳೆ, ಉಷ್ಣತೆಯ ಏರುಪೇರಿನಿಂದ ಭಾರೀ ಸಂಕಷ್ಟಕ್ಕೆ ಸಿಲುಕಿದೆ. ಅಡಿಕೆ ಸೇರಿದಂತೆ ಅನೇಕ ಬೆಳೆಗಳು ಶೇ.75 ಕ್ಕೂ ಹೆಚ್ಚು ಹಾನಿಗೊಳಗಾದರೂ, ಹವಾಮಾನ ಆಧಾರಿತ ಬೆಳೆ ವಿಮೆ ರೈತರಿಗೆ ನಿರಾಶೆ ಮೂಡಿಸಿದೆ. ಕೆಲವು ಪ್ರದೇಶಗಳಲ್ಲಿ ಕಟ್ಟಿ ಪಾವತಿಸಿದ ವಿಮಾ ಪ್ರೀಮಿಯಂಗೂ ಸಮನಾಗದ ಪರಿಹಾರ ಮೊತ್ತ ಜಮೆಯಾಗಿರುವುದು ರೈತರ ಆತಂಕಕ್ಕೆ ಕಾರಣವಾಗಿದೆ. ಕಳೆದ ವರ್ಷ ಸೆಪ್ಟೆಂಬರ್-ಅಕ್ಟೋಬರ್ ತಿಂಗಳಲ್ಲಿ ತೀವ್ರ ಮಳೆ, ಮಾರ್ಚ್-ಏಪ್ರಿಲ್‌ನಲ್ಲಿ ಅತಿಯಾದ ಬಿಸಿಲು ಬಿಸಿಲು, ಮೇ ನಂತರ 6 ತಿಂಗಳು ನಿರಂತರ ಮಳೆಯಿದ್ದರೂ ವಿಮೆ ಪರಿಹಾರವು ಲಭಿಸದಿರುವುದನ್ನು ಶಾಸಕರು ಪ್ರಶ್ನಿಸಿದರು.

## ಹಿಂಬಾಗಿಲ ರಾಜಕೀಯ ಭದ್ರತೆಗೆ ಅಪಾಯ ಕ್ಯಾ. ಚೌಟ



ನವದೆಹಲಿ: ನಿಷೇಧಿತ ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾ (PFI) ಸಂಘಟನೆಯು ಸೋಷಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ(SDPI) ಕಾರ್ಯಕರ್ತರ ಸೋಗಿನಲ್ಲಿ ನಮ್ಮ ಚುನಾವಣಾ ವ್ಯವಸ್ಥೆಯೊಳಗೆ ಮರುಪ್ರವೇಶಕ್ಕೆ ಪ್ರಯತ್ನಿಸುತ್ತಿರುವ ಅತ್ಯಂತ ಗಂಭೀರ ವಿಚಾರವನ್ನು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಲೋಕಸಭೆಯಲ್ಲಿ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿ ಕಳವಳ ವ್ಯಕ್ತಪಡಿಸಿದ್ದಾರೆ. ಜಾರಿ ನಿರ್ದೇಶನಾಲಯದ(ಇಡಿ) 2025ರ ನವೆಂಬರ್ 8ರ ಪತ್ರಿಕಾ ಪ್ರಕಟಣೆಯನ್ನು ಉಲ್ಲೇಖಿಸಿ ಸದನದಲ್ಲಿ ಮಾತನಾಡಿದ ಕ್ಯಾ. ಚೌಟ ಅವರು, ಎಸ್‌ಡಿಪಿಐಯು ನಿಷೇಧಿತ ಪಿಎಫ್‌ಐನ ರಾಜಕೀಯ ಮುಖವಾಣಿಯಾಗಿ ಕೆಲಸ ಮಾಡುತ್ತಿದೆ. ಅಷ್ಟೇಅಲ್ಲ, ಈ ಪಿಎಫ್‌ಐಯು ಎಸ್‌ಡಿಪಿಐನ ರಾಜಕೀಯ ಕಾರ್ಯ ಚಟುವಟಿ ಕೆಗಳನ್ನು ನಿಯಂತ್ರಿಸುವ ಜತೆಗೆ ಅದಕ್ಕೆ ಫಂ ಡಿಂಗ್ ಮಾಡುವ ಅತ್ಯಂತ ಗಂಭೀರ ವಿಚಾರ ವನ್ನೂ ಇಡಿ ಉಲ್ಲೇಖಿಸಿದೆ. ಹೀಗಿರುವಾಗ, ಪಿಎಫ್‌ಐ ಒಂದು ನಿಷೇಧಿತ ಸಂಘಟನೆಯಾಗಿರುವ ಕಾರಣ ಚುನಾವಣೆಯ ಮೇಲೆ ಪ್ರಭಾವ ಬೀರಲು ಅದು ಬಳಸುವ ಗುಪ್ತ ಮಾರ್ಗವು ರಾಷ್ಟ್ರದ ಏಕತೆ ಮತ್ತು ಸಮಗ್ರತೆಗೆ ಧಕ್ಕೆ ತರುತ್ತದೆ ಎಂದು ಹೇಳಿದ್ದಾರೆ.

## ಏರ್‌ಪೋರ್ಟ್‌ಗೆ ಪಾಯಿಂಟ್ ಆಫ್ ಕಾಲ್‌ಗೆ ಒತ್ತಾಯ




ನವದೆಹಲಿ: ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ತುರ್ತಾಗಿ "ಪಾಯಿಂಟ್ ಆಫ್ ಕಾಲ್" ಸ್ಥಾನ-ಮಾನ ನೀಡುವ ಅಗತ್ಯತೆಯನ್ನು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಇಂದು ಸಂಸತ್ತಿನಲ್ಲಿ ಪ್ರಸ್ತಾಪಿಸಿದ್ದಾರೆ. ಲೋಕಸಭೆಯಲ್ಲಿ ನಿಯಮ 377ರಡಿಯಲ್ಲಿ ಈ ವಿಷಯದ ಬಗ್ಗೆ ಧ್ವನಿಯೆತ್ತಿರುವ ಸಂಸದ ಕ್ಯಾ. ಚೌಟ ಅವರು, ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಕರಾವಳಿ ಕರ್ನಾಟಕ ಮತ್ತು ನೆರೆಯ ಕೇರಳಕ್ಕೆ ಪ್ರಮುಖ ವಾಯುಯಾನ ಹೆಬ್ಬಾಗಿಲಾಗಿದೆ. ಈ ಏರ್‌ಪೋರ್ಟ್ 2024-25ರ ಅವಧಿಯಲ್ಲಿ 7.15 ಲಕ್ಷ ಅಂತಾರಾಷ್ಟ್ರೀಯ ಪ್ರಯಾಣಿಕರು ಸೇರಿದಂತೆ ಒಟ್ಟು ಸುಮಾರು 23.4 ಲಕ್ಷ ಪ್ರಯಾಣಿಕರ ಪ್ರಯಾಣವನ್ನು ನಿರ್ವಹಿಸಿದ್ದು, ಆ ಮೂಲಕ ಸುಮಾರು 16,800ಕ್ಕೂ ಹೆಚ್ಚು ವಿಮಾನಗಳ ಹಾರಾಟ ನಡೆಸಿವೆ. ಇದು ವಾರ್ಷಿಕವಾಗಿ ಶೇ.15ಕ್ಕಿಂತ ಹೆಚ್ಚು ಬೆಳವಣಿಗೆಯನ್ನು ದಾಖಲಿಸಿದೆ. ಈ ಅಂಕಿ-ಅಂಶಗಳು ವಿಮಾನ ನಿಲ್ದಾಣದ ಬೆಳವಣಿಗೆ ಮತ್ತು ವಾಣಿಜ್ಯ ಉತ್ತೇಜನದ ಪ್ರಾಮುಖ್ಯತೆಯನ್ನು ಸ್ಪಷ್ಟವಾಗಿ ಎತ್ತಿ ತೋರಿಸುತ್ತವೆ ಎಂದು ಹೇಳಿದ್ದಾರೆ. ತುಳುನಾಡು ಪ್ರದೇಶಗಳ ಗಣನೀಯ ಸಂಖ್ಯೆಯ ಜನರು ಗಲ್ಫ್ ಮತ್ತು ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ಅವರು ಸದನದ ಗಮನಕ್ಕೆ ತಂದಿದ್ದಾರೆ.

## ಸಾಧಕರಿಗೆ ಪ್ರಶಸ್ತಿ ಪ್ರಧಾನ ಸಮಾರಂಭ ಪುರಸ್ಕಾರ್-2025




ಉಜಿರೆ: ಧನಾತ್ಮಕ ಚಿಂತನೆಗಳು ನಮ್ಮೊಳಗೆ ಹೊಸ ಬದಲಾವಣೆಗಳನ್ನು ಮೂಡಿಸುತ್ತಿದೆ. ಅವಕಾಶಗಳನ್ನು ಸಕ್ರೀಯವಾಗಿ ಬಳಸಿಕೊಂಡಾಗ ನಮ್ಮ ಪ್ರಯತ್ನ ಮತ್ತು ಕನಸುಗಳು ಫಲದಾಯಕವಾಗುತ್ತದೆ. ಶಿಕ್ಷಣ ಸಂಸ್ಥೆಗಳು ಸೇರಿದಂತೆ ವಿದ್ಯಾರ್ಥಿಗಳ ಯಶಸ್ಸಿಗೆ ಮೂಲ ಅಡಿಪಾಯ ಶಿಸ್ತು ಮತ್ತು ಶ್ರದ್ಧೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಪದವಿ ಪೂರ್ವ ಪ್ರಾಂಶುಪಾಲರ ಸಂಘದ ಅಧ್ಯಕ್ಷರು ಹಾಗು ಮಂಗಳೂರಿನ ನಂತೂರು ಎನ್.ಎಸ್.ಎ.ಎಮ್ ಕಾಲೇಜಿನ ಪ್ರಾಂಶುಪಾಲ ಡಾ. ನವೀನ್ ಶೆಟ್ಟಿ ಕೆ. ಅಭಿಪ್ರಾಯಪಟ್ಟರು. ವಿದ್ಯಾರ್ಥಿ ಜೀವನದಿಂದಲೇ ವಿನಯತೆ ಮತ್ತು ಸಂಸ್ಕಾರವನ್ನು ಬೆಳೆಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

# ಸುದ್ದಿ ತುಣುಕು

ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರು, 250 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದಲ್ಲಿ ಭರ್ತಿ ಮಾಡಲು ಈಗಾಗಲೇ ಅನುಮತಿ ನೀಡಲಾಗಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಹಾವೇರಿ ಜಿಲ್ಲೆಯ ಹುಕ್ಕೇರಿಮಠದ ಜಾತ್ರೆಗೆ ದಿನಗಣನೆ ಆರಂಭವಾಗಿದೆ. ಮಠದ ಜಾತ್ರೆಗೆ ಬರುವ ಭಕ್ತರ ಹಸಿವು ನೀಗಿಸಲು ದಾಸೋಹ ಸಮಿತಿ ಸಿದ್ಧತೆ ನಡೆಸಿದೆ.

ಕಾಣುವ ಕುರ್ಚಿಗೆ ಹಂಬಲಿಸಿದೇ ಮನ, ಕೂಡಬಲ್ಲೆನೇ ಒಂದು ದಿನ ಎಂದು ಬಿಜೆಪಿ ಶಾಸಕ ಸುನೀಲ್ ಕುಮಾರ್ ಅವರು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ದೇಶಿಸಿ ವಿಡಂಬನಾತ್ಮಕವಾಗಿ ಕಾಲೆಳೆದಿದ್ದಾರೆ.

ಸಾಮಾಜಿಕ ಬಹಿಷ್ಕಾರ ತಡೆ ಮಸೂದೆ ಹಾಗೂ ಜಿಬಿಎ ಎರಡನೇ ತಿದ್ದುಪಡಿ ಮಸೂದೆಗಳನ್ನು ಚಳಿಗಾಲದ ಅಧಿವೇಶನದ ವಿಧಾನಸಭೆ ಕಲಾಪದಲ್ಲಿ ಮಂಡನೆ ಮಾಡಲಾಗಿದೆ.

ಸರ್ಕಾರ ಪತ್ರ ಬರಹಗಾರರ ಹುದ್ದೆ ತಗೆಯುವುದಿಲ್ಲ ಎಂದು ಹೇಳುತ್ತಾ ಪರೋಕ್ಷವಾಗಿ ಪತ್ರ ಬರಹಗಾರರನ್ನು ಮೂಲೆಗುಂಪು ಮಾಡುತ್ತಿದ್ದಾರೆಂದು ಆರೋಪಿಸಲಾಗುತ್ತಿದೆ.

ಮೈಸೂರಿನಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೂನಿಟಿ ಮಾಲ್ ನಿರ್ಮಾಣಕ್ಕೆ ರಾಜ್ಯ ಹೈಕೋರ್ಟ್‌ನಿಂದ ತಡೆ.

ಕುದುರೆಮುಖ ರಾಷ್ಟ್ರೀಯ ಉದ್ಯಾನವನದಲ್ಲಿನ ಅರಣ್ಯ ನಿವಾಸಿಗಳಿಗೆ ಪುನರ್ವಸತಿ ಕಲ್ಪಿಸಲು ಸರ್ಕಾರ ಸಿದ್ಧವಾಗಿದೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಹೇಳಿದರು.

ಶರಾವತಿ ಪಂಪ್ಡ್ ಸ್ಟೋರೇಜ್ ಜಲವಿದ್ಯುತ್ ಯೋಜನೆಗೆ ಹೋರಾಟಗಾರರು ವಿರೋಧ ವ್ಯಕ್ತಪಡಿಸುತ್ತಿರುವ ಮಧ್ಯೆ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ಈ ಯೋಜನೆಯಿಂದ ಪರಿಸರಕ್ಕೆ ಹಾನಿ ಆಗುವುದಿಲ್ಲ ಎಂದು ಸದನದಲ್ಲಿ ತಿಳಿಸಿದ್ದಾರೆ.

ಕಾರಾಗೃಹ ಹಾಗೂ ಸುಧಾರಣಾ ಸೇವೆಗಳ ಇಲಾಖೆಯ ರಾಜ್ಯ ಪೊಲೀಸ್ ಮಹಾನಿರ್ದೇಶಕರಾಗಿ ಅಧಿಕಾರ ಸ್ವೀಕರಿಸಿದ ಅಲೋಕ್ ಕುಮಾರ್, ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಖಡಕ್ ಸಂದೇಶ ಕೊಟ್ಟಿದ್ದಾರೆ.

ಆರ್‌ಟಿಒ ಕಚೇರಿಗಳಲ್ಲಿ ಮಧ್ಯವರ್ತಿಗಳು ಇರುವುದು ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಯನ್ನು ಜವಾಬ್ದಾರಿಯನ್ನಾಗಿ ಮಾಡಿ ಅಮಾನತುಗೊಳಿಸಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ವಾರ್ನಿಂಗ್ ಕೊಟ್ಟಿದ್ದಾರೆ.

ಸ್ಟಾರ್ಟ್‌ಅಪ್ ಕಂಪನಿಗಳನ್ನು ಉತ್ತೇಜಿಸಲು ಸರ್ಕಾರ ಸಾವಿರ ಕೋಟಿ ರೂಪಾಯಿಗಳ ಸ್ಟಾರ್ಟ್‌ಅಪ್ ನಿಧಿಯನ್ನು ಸ್ಥಾಪಿಸುತ್ತಿದೆ ಎಂದು ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಘೋಷಿಸಿದ್ದಾರೆ.

ಕಾಂಗ್ರೆಸ್ ಸಂಸದ ಶಶಿ ತರೂರ್ ಅವರಿಗೆ ವೀರ ಸಾವರ್ಕರ್ ಪ್ರಶಸ್ತಿ ಘೋಷಣೆಯಾಗಿತ್ತು. ಇದಕ್ಕೆ ಪಕ್ಷ ವಿರೋಧಿಸಿದ ಬೆನ್ನಲ್ಲೇ, ಅವರು ಪ್ರಶಸ್ತಿ ಪಡೆಯಲು ನಿರಾಕರಿಸಿದ್ದಾರೆ.

ಪೋಕ್ಸೋ ಪ್ರಕರಣದಿಂದ ಚಿತ್ರದುರ್ಗದ ಮುರುಘಾ ಶರಣರು ಸೇರಿದಂತೆ ಇತರೆ ಇಬ್ಬರು ಆರೋಪಿಗಳನ್ನು ಖುಲಾಸೆಗೊಳಿಸಿರುವುದನ್ನು ಪ್ರಶ್ನಿಸಿ ಸಂತ್ರಸ್ತ ಬಾಲಕಿಯರು ಹೈಕೋರ್ಟ್ ಮೊರೆ ಹೋಗಿದ್ದಾರೆ.

ಋತುಚಕ್ರ ದಿನದ ರಜೆ ಘೋಷಣೆ ಮಾಡಿ ಸರ್ಕಾರ ಹೊರಡಿಸಿದ್ದ ಅಧಿಸೂಚನೆ ಪ್ರಶ್ನಿಸಿ ಬೆಂಗಳೂರು ಹೋಟೆಲ್‌ಗಳ ಸಂಘ ಸಲ್ಲಿಸಿದ್ದ ಅರ್ಜಿಗೆ ಆಕ್ಷೇಪಣೆ ಸಲ್ಲಿಸಿರುವ ಸರ್ಕಾರ, ತನ್ನ ನಿಲುವು ಸಂವಿಧಾನ ಬದ್ಧವಾಗಿದೆ ಎಂದು ಸಮರ್ಥನೆ ಮಾಡಿಕೊಂಡಿದೆ.

ಧರ್ಮಸ್ಥಳ ಪ್ರಕರಣದಲ್ಲಿ ಷಡ್ಯಂತ್ರ ಎಂಬುದು ಬೆಳಕಿಗೆ ಬಂದಿದ್ದು, ಬುರುಡೆ ಗ್ಯಾಂಗ್ ಏಕೆ ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ಮಾಡಿತು ಎಂಬುವುದರ ಬಗ್ಗೆ ಸಮಗ್ರ ತನಿಖೆ ನಡೆಸಬೇಕು ಎಂದು ಬಿಜೆಪಿ ನಾಯಕರು ಒತ್ತಾಯಿಸಿದ್ದಾರೆ.

## ಪನೀರ್ ಪರೋಟ



**ಬೇಕಾಗುವ ಸಾಮಗ್ರಿಗಳು :**

ಗೋಧಿ ಹಿಟ್ಟು – 4 ಕಪ್
ಪನೀರ್ – 200
ಹಸಿ ಮೆಣಸು – 4-5
ಕೊತ್ತಂಬರಿ ಸೊಪ್ಪು – ಸ್ವಲ್ಪ
ಕೊತ್ತಂಬರಿ ಪುಡಿ – 1 ಚಮಚ
ಉಪ್ಪು – ರುಚಿಗೆ
ತುಪ್ಪ – 4 ಚಮಚ

**ಮಾಡುವ ವಿಧಾನ :**


ಗೋಧಿ ಹಿಟ್ಟಿಗೆ ಸ್ವಲ್ಪ ಉಪ್ಪು, ಎಣ್ಣೆ ಸೇರಿಸಿ ಚಪಾತಿ ಹಿಟ್ಟಿನಂತೆ ಸ್ವಲ್ಪ ಮೆದುವಾಗಿ ನಾದಿಕೊಳ್ಳಬೇಕು. ನಂತರ ತುರಿದ ಪನೀರ್‌ಗೆ ಹಸಿ ಮೆಣಸು ಮತ್ತು ಕೊತ್ತಂಬರಿ ಸೊಪ್ಪನ್ನು ಚೆನ್ನಾಗಿ ಹೆಚ್ಚಿ ಅದಕ್ಕೆ ಉಪ್ಪು, ಕೊತ್ತಂಬರಿ ಪುಡಿ ಸೇರಿಸಿ ಚೆನ್ನಾಗಿ ಮಿಶ್ರ ಮಾಡಿ, ಗೋಧಿ ಹಿಟ್ಟಿನ್ನು ಚಿಕ್ಕ ಉಂಡೆ ಮಾಡಿ, ಚಿಕ್ಕದಾಗಿ ಲಟ್ಟಿಸಿ, ಅದರ ಒಳಗೆ ಪನೀರ್ ಹೂರಣ ತುಂಬಿಸಿ, ಮೃದುವಾಗಿ ಲಟ್ಟಿಸಬೇಕು. ನಂತರ ತುಪ್ಪ ಹಾಕಿ ಬೇಯಿಸಿದರೆ ಸವಿಯಾದ ಮತ್ತು ಆರೋಗ್ಯಕರವಾದ ಪನೀರ್ ಪರೋಟ ಸವಿಯಲು ಸಿದ್ಧ.

## ಅಮೇರಿಕಾದಲ್ಲಿ ಆರ್ಥಿಕ ಹಿಂಜರಿತದ ಲಕ್ಷಣ..!




ಅಮೇರಿಕ : ಅಮೇರಿಕಾದಲ್ಲಿ ಆರ್ಥಿಕ ಹಿಂಜರಿತದ ಲಕ್ಷಣಗಳು ತೀವ್ರಗೊಳ್ಳುತ್ತಿರುವ ಬೆನ್ನಲ್ಲೇ, ಈ ವರ್ಷ ದಿವಾಳಿತನ ಅರ್ಜಿಗಳ ಸಂಖ್ಯೆ 15 ವರ್ಷಗಳ ದಾಖಲೆಯ ಗರಿಷ್ಠ ಮಟ್ಟಕ್ಕೆ ತಲುಪಿದೆ. ನವೆಂಬರ್ ಅಂತ್ಯದವರೆಗೆ 717 ಕ್ಕೂ ಹೆಚ್ಚು ದೊಡ್ಡ ಕಂಪನಿಗಳು ಮತ್ತು 2221 ಕ್ಕೂ ಹೆಚ್ಚು ಸಣ್ಣ ಕಂಪನಿಗಳು ದಿವಾಳಿತನಕ್ಕೆ ಅರ್ಜಿ ಸಲ್ಲಿಸಿವೆ. ಕಳೆದ ವರ್ಷ (2024) ಇದೇ ಅವಧಿಗೆ ಹೋಲಿಸಿದರೆ ದೊಡ್ಡ ಕಂಪನಿಗಳ ದಿವಾಳಿತನ ಪ್ರಮಾಣ ಶೇ.40ರಷ್ಟು ಹೆಚ್ಚಳವಾಗಿದ್ದರೆ, ಸಣ್ಣ ಕಂಪನಿಗಳ ದಿವಾಳಿತನ ಶೇ.83 ರಷ್ಟು ಜಿಗಿದಿದೆ.

## ಭಾರತೀಯ ಟೆಕ್ಕಿಗಳ ಪರವಾಗಿ ಧ್ವನಿ



ನವದೆಹಲಿ : ಅಮೆರಿಕ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಅಧಿಕಾರ ವಹಿಸಿಕೊಂಡ ನಂತರ ಎಚ್-1ಬಿ ವೀಸಾ ನಿಯಮಗಳು ಕಠಿಣವಾಗುತ್ತಿವೆ ಎಂಬ ಆತಂಕದ ನಡುವೆಯೇ, ಅಮೆರಿಕ ಮೂಲದ ತಂತ್ರಜ್ಞಾನ ಕಂಪನಿಯ ಸಹ-ಸಂಸ್ಥಾಪಕರೊಬ್ಬರು ಭಾರತೀಯ ಟೆಕ್ಕಿಗಳ ಪರವಾಗಿ ಧ್ವನಿ ಎತ್ತಿದ್ದಾರೆ. ಲಂಡನ್ ಮೂಲದ ಪ್ರಧಾನ ಕಚೇರಿ ಹೊಂದಿರುವ 'ಮೆಟಾವ್ಯೂ ಎಐ' ಕಂಪನಿಯ ಸಿಟಿಒ ಶಹರಿಯಾರ್ ತಾಜ್‌ಬಕ್ಷ್, ಎಚ್-1ಬಿ ವೀಸಾ ಶುಲ್ಕ ಎಷ್ಟೇ ಹೆಚ್ಚಾದರೂ ನಾವು ಭಾರತೀಯ ಪ್ರತಿಭೆಗಳನ್ನು ನೇಮಿಸಿಕೊಳ್ಳುವುದನ್ನು ನಿಲ್ಲಿಸುವುದಿಲ್ಲ ಎಂದು ಘೋಷಿಸಿದ್ದಾರೆ.

## ಜೈಶ್-ಎ-ಮೊಹಮ್ಮದ್ – ಲಷ್ಕರ್-ಎ-ತೈಬಾ ಮೀಟಿಂಗ್!



ನವದೆಹಲಿ : ಪಾಕಿಸ್ತಾನದ ಬಹಾವಲ್ಪುರದಲ್ಲಿ ಜೈಶ್, ಲಷ್ಕರ್ ಭಯೋತ್ಪಾದಕರು ಸಭೆ ನಡೆಸಿರುವ ಫೋಟೊ ಸಾಮಾಜಿಕ ಮಾಧ್ಯಮಗಳಲ್ಲಿ ಕಾಣಿಸಿಕೊಂಡಿದೆ. ಏಪ್ರಿಲ್‌ನಲ್ಲಿ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ 26 ಜನರ ಸಾವಿಗೆ ಕಾರಣವಾದ ಲಷ್ಕರ್-ಎ-ತೈಬಾ ಮತ್ತು ನವೆಂಬರ್‌ನಲ್ಲಿ ದೆಹಲಿಯ ಕೆಂಪುಕೋಟೆ ಬಳಿ 15 ಜನರ ಸಾವಿಗೆ ಕಾರಣವಾದ ಜೈಶ್-ಎ-ಮೊಹಮ್ಮದ್ ಎಂಬ ಎರಡು ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕ ಗುಂಪುಗಳ ಉಗ್ರರ ಸಭೆ ಇದಾಗಿದ್ದು, ಫೋಟೊ ವೈರಲ್ ಆಗಿದೆ. ಎಲ್‌ಇಟಿ ಉಪ ಮುಖ್ಯಸ್ಥ ಸೈಫುಲ್ಲಾ ಕಸೂರಿ ಜೈಶ್ ಕಮಾಂಡರ್‌ಗಳೊಂದಿಗೆ ಕಾಣಿಸಿಕೊಂಡಿದ್ದಾನೆ.

## ಜೈಶಂಕರ್ ಮಾತಿಗೆ ಪಾಕಿಸ್ತಾನ ಕಿಡಿ



ಇಸ್ಲಾಮಾಬಾದ್: ಮಿಲಿಟರಿ ಬಗ್ಗೆ ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್ ನೀಡಿರುವ ಹೇಳಿಕೆಗಳನ್ನು ಪಾಕಿಸ್ತಾನ ಭಾನುವಾರ ಟೀಕಿಸಿದೆ. ಸಶಸ್ತ್ರ ಪಡೆಗಳು ಸೇರಿದಂತೆ ತನ್ನ ಸಂಸ್ಥೆಗಳು ರಾಷ್ಟ್ರೀಯ ಭದ್ರತೆಯ ಆಧಾರಸ್ತಂಭ ಎಂದು ಹೇಳಿದೆ. ನವದೆಹಲಿಯಲ್ಲಿ ನಡೆದ ಹಿಂದೂಸ್ತಾನ್ ಟೈಮ್ಸ್ ನಾಯಕತ್ವ ಶೃಂಗಸಭೆಯಲ್ಲಿ ಮಾತನಾಡಿದ ಜೈಶಂಕರ್, ಭಾರತದ ಹೆಚ್ಚಿನ ಸಮಸ್ಯೆ ಪಾಕಿಸ್ತಾನದ ಮಿಲಿಟರಿಯಿಂದ ಬರುತ್ತದೆ ಎಂದಿದ್ದರು. ಅಲ್ಲದೇ ಭಯೋತ್ಪಾದಕ ಗುಂಪುಗಳಿಗೆ ಅದರ ಬೆಂಬಲವನ್ನು ಸಹ ಉಲ್ಲೇಖಿಸಿದ್ದರು.

## 2025ರ ಅಮೇರಿಕಾ ರಾಷ್ಟ್ರೀಯ ಭದ್ರತಾ ಕಾರ್ಯತಂತ್ರ!



ವಾಷಿಂಗ್ಟನ್: ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು 2025ರ ರಾಷ್ಟ್ರೀಯ ಭದ್ರತಾ ಕಾರ್ಯತಂತ್ರ (ಎನ್.ಎಸ್.ಎಸ್)ವನ್ನು ಬಿಡುಗಡೆಗೊಳಿಸಿದ್ದು ಆಡಳಿತದ ವಿದೇಶಾಂಗ ನೀತಿಯ ನಿಷ್ಠುರ ನೀಲನಕ್ಷೆಯನ್ನು ಒದಗಿಸಿದೆ. ಭಾರತದೊಂದಿಗಿನ ಪಾಲುದಾರಿಕೆಯ ಬಗ್ಗೆ ಅಮೆರಿಕಾದ ಅಭಿವ್ಯಕ್ತಿಯಲ್ಲಿ ಸ್ಪಷ್ಟ ಬದಲಾವಣೆಯನ್ನು ಈ ಕಾರ್ಯತಂತ್ರ ತೋರಿಸಿದೆ. 2017ರ ಎನ್‌ಎಸ್‌ಎಸ್‌ನಲ್ಲಿ 'ಇಂಡೊ-ಪೆಸಿಫಿಕ್ ಕಾರ್ಯತಂತ್ರದಲ್ಲಿ ಭಾರತಕ್ಕೆ ಹೆಮ್ಮೆಯ ಸ್ಥಾನ ನೀಡಲಾಗಿತ್ತು. 'ಭಾರತವು ಪ್ರಮುಖ ಜಾಗತಿಕ ಶಕ್ತಿಯಾಗಿ ಮತ್ತು ಬಲವಾದ ಕಾರ್ಯತಂತ್ರ ಮತ್ತು ರಕ್ಷಣಾ ಪಾಲುದಾರನಾಗಿ ಹೊರ ಹೊಮ್ಮುವುದನ್ನು' ಸ್ವಾಗತಿಸಲಾಗಿತ್ತು.

## ಫಾರ್ಮುಲಾ 2 ಸೀಸನ್‌ಗೆ ಬೆಂಗಳೂರಿಗ ಕುಷ್ ಮೈನಿ ಸಜ್ಜು



ಬೆಂಗಳೂರು: ಫಾರ್ಮುಲಾ 2 ಚಾಂಪಿಯನ್‌ಶಿಪ್-2026ರಲ್ಲಿ ಬೆಂಗಳೂರಿಗ ಕುಷ್ ಮೈನಿ ART ಗ್ರ್ಯಾಂಡ್ ಪ್ರಿಕ್ಸ್ ಪರ ಸ್ಪರ್ಧಿಸಲಿದ್ದಾರೆ. ಇದು ಅವರ ಸಿಂಗಲ್-ಸೀಟರ್ ವೃತ್ತಿಜೀವನದ ಮಹತ್ವದ ಹೆಜ್ಜೆಯಾಗಿದ್ದು, 2026ರ ಸೀಸನ್ ಫಾರ್ಮುಲಾ 2ನಲ್ಲಿ ಮೈನಿ ಅವರ ನಾಲ್ಕನೇ ಸೀಸನ್ ಇದಾಗಿದೆ. 2025ರ ಫಾರ್ಮುಲಾ 2 ಸೀಸನ್ ಯೋಜನೆಯಂತೆ ನಡೆಯದಿದ್ದರೂ, ಮೊನಾಕೊ ಗ್ರ್ಯಾಂಡ್ ಪ್ರಿಕ್ಸ್‌ನಲ್ಲಿ ಕುಷ್ ಮೈನಿ ಐತಿಹಾಸಿಕ ಗೆಲುವು ಸಾಧಿಸಿದ್ದರು. ನಂತರ ಅಬುಧಾಬಿಯಲ್ಲಿ ಅದ್ಭುತ ಪ್ರದರ್ಶನ ನೀಡಿದ ಅವರು, ಈ ಋತುವನ್ನು ಉನ್ನತ ಮಟ್ಟದಲ್ಲಿ ಅಂತ್ಯಗೊಳಿಸಿದರು.

## ಟೆನಿಸ್: ಧನುಷ್, ರೂಹಿ ಚಾಂಪಿಯನ್



ಬೆಂಗಳೂರು: ಕರ್ನಾಟಕದ ಧನುಷ್ ಎಸ್.ಎಂ. ಮತ್ತು ರೂಹಿ ಸಿಂಗ್ ಅವರು ಎಐಟಿಎ 12 ವರ್ಷದೊಳಗಿನವರ ರಾಷ್ಟ್ರೀಯ ಸರಣಿಯ ಟೆನಿಸ್ ಟೂರ್ನಿಯಲ್ಲಿ ಕ್ರಮವಾಗಿ ಬಾಲಕರ ಮತ್ತು ಬಾಲಕಿಯರ ಸಿಂಗಲ್ಸ್ ಪ್ರಶಸ್ತಿಯನ್ನು ಗೆದ್ದುಕೊಂಡರು. ಫೈನಲ್‌ನಲ್ಲಿ ನಾಲ್ಕನೇ ಶ್ರೇಯಾಂಕದ ಧನುಷ್ 6-4, 6-1ರಲ್ಲಿ ನೇರ ಸೆಟ್‌ಗಳಿಂದ ಮೂರನೇ ಶ್ರೇಯಾಂಕದ ಆದಿಶ್ ಪಿ.ಎಂ. (ತಮಿಳುನಾಡು) ಅವರನ್ನು ಮಣಿಸಿದರು. ಬಾಲಕಿಯರ ಫೈನಲ್‌ನಲ್ಲಿ ನಾಲ್ಕನೇ ಶ್ರೇಯಾಂಕದ ರೂಹಿ 2-6, 6-4, 6-3 ರಿಂದ ಎರಡನೇ ಶ್ರೇಯಾಂಕದ ಅನೀಕ್ಷಾ ಜಿ. (ತೆಲಂಗಾಣ) ಅವರಿಗೆ ಆಘಾತ ನೀಡಿದರು.

## ವಿಶ್ವಕಪ್ ಹಾಕಿಯಲ್ಲಿ ಭಾರತಕ್ಕೆ ಕಂಚು



ಚೆನ್ನೈ: ಎರಡು ಗೋಲುಗಳ ಹಿನ್ನಡೆಯಿಂದ ವೀರೋಚಿತ ಆಟವಾಡಿದ ಭಾರತ ತಂಡ ಬುಧವಾರ 4-2 ಗೋಲುಗಳಿಂದ ಅರ್ಜೆಂಟೀನಾ ತಂಡವನ್ನು ಸೋಲಿಸಿ ಪುರುಷರ ಜೂನಿಯರ್ ವಿಶ್ವಕಪ್ ಟೂರ್ನಿಯಲ್ಲಿ ಕಂಚಿನ ಪದಕ ಗೆದ್ದುಕೊಂಡಿತು. ಅಂಕಿತ್ ಪಾಲ್ (49ನೇ ನಿಮಿಷ), ಮನಮೀತ್ ಸಿಂಗ್ (52ನೇ ನಿಮಿಷ), ಅನ್ಮೋಲ್ ಎಕ್ಕಾ (58ನೇ ನಿಮಿಷ) ಅವರು ಪೆನಾಲ್ಟಿ ಕಾರ್ನರ್‌ಗಳ ಮೂಲಕ ಗೋಲುಗಳನ್ನು ಗಳಿಸಿದರು. ಪಂದ್ಯ ಮುಗಿಯಲು ನಾಲ್ಕು ನಿಮಿಷಗಳಿರುವಾಗ ಶಾರದಾನಂದ ತಿವಾರಿ ಅವರು ಪೆನಾಲ್ಟಿ ಸ್ಟ್ರೋಕ್‌ಅನ್ನು ಗೋಲಾಗಿ ಪರಿವರ್ತಿಸಿದರು.

## ಆದಾಯ ಮಿತಿ 8 ಲಕ್ಷ ದಾಟಿದರೆ ಹಿಂದುಳಿದ ಮೀಸಲಾತಿಗೆ ಅನರ್ಹ!




ಬೆಂಗಳೂರು: 'ಪ್ರವರ್ಗ 2-ಎ (ಹಿಂದುಳಿದ ವರ್ಗ) ಅಡಿಯಲ್ಲಿ ಪೋಷಕರ ವಾರ್ಷಿಕ ಆದಾಯ ನಿಗದಿತ ಮಿತಿಯನ್ನು ದಾಟಿದ್ದರೆ ಅಭ್ಯರ್ಥಿಯು ಕೆನೆ ಪದರ ವ್ಯಾಪ್ತಿಗೆ ಒಳಪಡುತ್ತಾರೆ. ಹಾಗಾಗಿ ಅವರು ಮೀಸಲಾತಿ ಪತ್ರ ಪಡೆಯಲು ಅನರ್ಹರಾಗುತ್ತಾರೆ' ಎಂದು ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ. ಒಂದು ವೇಳೆ ಆದಾಯವು ನಿಗದಿತ ಮಿತಿ ಯನ್ನು ದಾಟಿದ್ದರೆ, ಆದಾಯ ತೆರಿಗೆ ಪಾವತಿ ದಾರ ಆಗಿದ್ದರೆ ಆಗ ಆತನಿಗೆ ಕೆನೆ ಪದರ ನಿಯಮ ಅನ್ವಯ ಆಗುತ್ತದೆ ಮತ್ತು ಅಭ್ಯರ್ಥಿ ಯು ಪ್ರವರ್ಗ 2-ಎ ಅಡಿ ಮೀಸಲಾತಿಯ ಅಧಿಕಾರ ಹೊಂದುವ ಬೇಡಿಕೆ ಸಲ್ಲಿಸಲು ಅವಕಾಶ ಹೊಂದಿರುವುದಿಲ್ಲ' ಎಂದು ತೀರ್ಪಿನಲ್ಲಿ ವಿವರಿಸಿದೆ.

## ಅಲೋಕ್ ಕುಮಾರ್‌ಗೆ ಡಿಜಿಪಿಯಾಗಿ ಬಡ್ತಿ



ಬೆಂಗಳೂರು : ಹಿರಿಯ ಐಪಿಎಸ್ ಅಧಿಕಾರಿ ಅಲೋಕ್ ಕುಮಾರ್ ವಿರುದ್ಧದ ಫೋನ್ ಟ್ಯಾಪಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಆದೇಶಿಸಿದ್ದ ಇಲಾಖಾ ತನಿಖೆಯನ್ನು ಕೇಂದ್ರ ಆಡಳಿತಾತ್ಮಕ ನ್ಯಾಯಮಂಡಳಿ ಇತ್ತೀಚೆಗೆ ರದ್ದುಗೊಳಿಸಿತ್ತು. ಇದಿಗ ಅಲೋಕ್ ಕುಮಾರ್‌ಗೆ ಎಡಿಜಿಪಿಯಿಂದ ಡಿಜಿಪಿಯಾಗಿ ಬಡ್ತಿ ನೀಡಿದ ರಾಜ್ಯ ಸರ್ಕಾರ, ಕಾರಾಗೃಹ ಇಲಾಖೆಗೆ ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ. ಆ ಮೂಲಕ ಎಂಟು ತಿಂಗಳ ಹೋರಾಟಕ್ಕೆ ಜಯ ಸಿಕ್ಕಿದೆ. ಅಲೋಕ್ ಕುಮಾರ್‌ಗೆ ಕಾರಾಗೃಹ ಇಲಾಖೆಯ ಡಿಜಿಪಿ ಯಾಗಿ ವರ್ಗಾವಣೆ ಹಿನ್ನಲೆ ಪೊಲೀಸ್ ತರಬೇತಿ ಇಲಾಖೆಯ ಎಡಿಜಿಪಿಯಾಗಿ ಬಿ. ದಯಾನಂದ್‌ರನ್ನು ವರ್ಗಾವಣೆ ಮಾಡಿದೆ.

## ಚುನಾವಣಾ ಅಕ್ರಮ ಆರೋಪ: ಸಿದ್ದರಾಮಯ್ಯಗೆ ನೋಟೀಸ್



ಬೆಂಗಳೂರು : ಚುನಾವಣಾ ಅಕ್ರಮ ಆರೋಪ ಸಂಬಂಧ ಕರ್ನಾಟಕ ಸಿಎಂ ಸಿದ್ದರಾಮಯ್ಯ ಅವರಿಗೆ ಸುಪ್ರೀಂಕೋರ್ಟ್ ನೋಟಿಸ್ ನೀಡಿದೆ. 2023ರ ವಿಧಾನಸಭಾ ಚುನಾವಣೆಯಲ್ಲಿ ವರುಣಾ ಕ್ಷೇತ್ರದಿಂದ ಸಿದ್ದರಾಮಯ್ಯ ಗೆಲುವನ್ನು ಪ್ರಶ್ನಿಸಿ ಕೆ. ಶಂಕರ್ ಎನ್ನುವರು ಸಲ್ಲಿಸಿದ್ದ ಮೇಲ್ಮನವಿ ಸಂಬಂಧ ವಿಚಾರಣೆ ನಡೆಸಿರುವ ನ್ಯಾ.ವಿಕ್ರಮನಾಥ್ ನೇತೃತ್ವದ ದ್ವಿ ಸದಸ್ಯ ಪೀಠ, ಸಿದ್ದರಾಮಯ್ಯ ಮತ್ತು ಚುನಾವಣಾ ಆಯೋಗಕ್ಕೆ ನೋಟೀಸ್ ಜಾರಿ ಮಾಡಿದೆ. 2023ರ ಚುನಾವಣೆಯಲ್ಲಿ ಮತದಾರರಿಗೆ ಗ್ಯಾರಂಟಿ ಯೋಜನೆಗಳ ಆಮಿಷ ನೀಡಿ ಸಿದ್ದ ರಾಮಯ್ಯ ಗೆದ್ದಿದ್ದಾರೆ. ಹೀಗಾಗಿ ಅವರ ಆಯ್ಕೆಯನ್ನು ಅಸಿಂಧುಗೊಳಿಸಬೇಕು ಎಂದು ಆಗ್ರಹಿಸಿದ್ದರು.

## ಬೆಳಗಾವಿ ವಿಭಜಿಸಿ ಚಿಕ್ಕೋಡಿ, ಗೋಕಾಕ್ ನೂತನ ಜಿಲ್ಲೆಯಾಗಿಸುವ ಪ್ರಸ್ತಾವ




ಬೆಳಗಾವಿ : ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಚಿಕ್ಕೋಡಿ ಮತ್ತು ಗೋಕಾಕ್‌ಗಳನ್ನು ನೂತನ ಜಿಲ್ಲೆಗಳನ್ನಾಗಿ ಘೋಷಿಸುವ ಸಂಬಂಧಪಟ್ಟಂತೆ ಅಭಿಪ್ರಾಯ ಸಂಗ್ರಹಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ವಿಧಾನಸಭೆಯಲ್ಲಿ ತಿಳಿಸಿದರು. ಐಹೊಳೆ ದುರ್ಯೋಧನ ಮಹಾಲಿಂಗಪ್ಪ ಅವರ ಸರ್ಕಾರದ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದ ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರು, ದೊಡ್ಡ ಜಿಲ್ಲೆಗಳನ್ನು ಆಡಳಿತಾತ್ಮಕವಾಗಿ ನಿರ್ವಹಣೆ ಮಾಡುವುದು ಕಷ್ಟ. ಇದರಿಂದಾಗಿ ಜನಪರ ಆಡಳಿತ ಕೊಡುವುದು ಕಷ್ಟಸಾಧ್ಯವೆಂಬುದು ಸರ್ಕಾರದ ಗಮನಕ್ಕೆ ಬಂದಿದೆ ಎಂದರು.

## ಇನ್ನೂ ಕೆಲವು ಶಾಲೆಗಳನ್ನು ತೆರೆಯಲಾಗುವುದು : ಮಧು ಬಂಗಾರಪ್ಪ




ಬೆಳಗಾವಿ: ರಾಜ್ಯಾದ್ಯಂತ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯಲು ರಾಜ್ಯ ಸರ್ಕಾರ ಕನ್ನಡ ಮಾಧ್ಯಮದ ಪ್ರಾಥಮಿಕ ಶಾಲೆಗಳನ್ನು ಮುಚ್ಚುವ ನಿರ್ಧಾರಕ್ಕೆ ಬಂದಿದೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ವರದಿಯಾಗುತ್ತಿದೆ. ಇಂತಹ ವರದಿಗಳನ್ನು ತಳ್ಳಿ ಹಾಕಿರುವ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಯಾವುದೇ ಒಂದು ಶಾಲೆಯನ್ನು ಮುಚ್ಚುವುದಿಲ್ಲ, ಆದರೆ ಪರಿಸ್ಥಿತಿ ಅಗತ್ಯವಿದ್ದರೆ ಇನ್ನೂ ಕೆಲವು ಶಾಲೆಗಳನ್ನು ತೆರೆಯಲಾಗುವುದು ಎಂದು ಸ್ಪಷ್ಟಪಡಿಸಿದರು. ವಿಧಾನಪರಿಷತ್ತಿನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಮಾತನಾಡಿದ ಸಚಿವರು, ಕನ್ನಡ ಮಾಧ್ಯಮ ಶಾಲೆಗಳನ್ನು ಮುಚ್ಚುವುದಾಗಿ ಎಲ್ಲಿಯೂ ಹೇಳಿಲ್ಲ ಎಂದರು.

## ರಾಜ್ಯದ ಸರ್ಕಾರಿ ಶಾಲೆಗಳಲ್ಲಿ 'LKG, UKG' ಪ್ರಾರಂಭಿಸಲು ನಿರ್ಧಾರ



ಬೆಂಗಳೂರು: ರಾಜ್ಯ ಸರ್ಕಾರವು 2025-26ನೇ ಸಾಲಿನ ಆಯವ್ಯಯ ಕಂಡಿಕ ಸಂಖ್ಯೆ 111(i)ರಂತೆ ರಾಜ್ಯದಲ್ಲಿ, ಪೂರ್ವ ಪ್ರಾಥಮಿಕ ತರಗತಿಗಳನ್ನು (LKG - UKG) ಪ್ರಾರಂಭಿಸುವ ಕುರಿತು ಮಹತ್ವದ ಆದೇಶ ಹೊರಡಿಸಿದೆ. ಸರ್ಕಾರಿ ಆದೇಶ ಅನ್ವಯ ಪ್ರತಿ ಪೂರ್ವ ಪ್ರಾಥಮಿಕ ತರಗತಿಗೆ ಒಬ್ಬ ಶಿಕ್ಷಕರು ಮತ್ತು ಒಬ್ಬರು ಅಯಾರನ್ನು ನಿಗದಿಪಡಿಸಿದ ಮಾನ ದಂಡಗಳಂತೆ ಶಾಲಾ ಎಸ್.ಡಿ.ಎಂ.ಸಿ ವತಿಯಿಂದ ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳುವುದು. ಕನಿಷ್ಠ 20 ಮಕ್ಕಳು ಮಕ್ಕಳು ಲಭ್ಯವಿಲ್ಲದಿದ್ದಲ್ಲಿ ತರಗತಿ ಫಾರಂಭಿಸಕೂಡದು, ಆದರೆ 2026-27ನೇ ಸಾಲಿಗೆ LKG ಲಭ್ಯವಾದಲ್ಲಿ LKG ತರಗತಿಯನ್ನು ಈ ವರ್ಷದಲ್ಲಿಯೇ ಪ್ರಾರಂಭಿಸುವುದು.

## ಡಿ.ಆರ್.ಡಿ.ಒದಿಂದ ಮಾರ್ಫಿಂಗ್‌ವಿಂಗ್ ತಂತ್ರಜ್ಞಾನ ಪರಿಕ್ಷೆ ಯಶಸ್ವಿ



ನವದೆಹಲಿ : ವಿಶ್ವದ ಕೆಲವೇ ಕೆಲವು ದೇಶಗಳು ಮಾತ್ರ ಸಾಧಿಸಿದ್ದನ್ನು ಭಾರತ ಸಾಧಿಸಿದೆ. ಭಾರತದ ಯುದ್ಧ ವಿಮಾನಗಳು ಹಾರಾಟ ನಡೆಸುವಾಗಲೇ ತಮ್ಮ ಆಕಾರವನ್ನು ಬದಲಾಯಿಸಲು ಸಾಧ್ಯವಾಗುತ್ತದೆ. ಆಖಆಔ ಹೈಟೆಕ್ ಯುದ್ಧ ವಿಮಾನ ಮಾರ್ಫಿಂಗ್ ವಿಂಗ್ ತಂತ್ರಜ್ಞಾನವನ್ನು ಯಶಸ್ವಿಯಾಗಿ ಪರೀಕ್ಷಿಸಿದೆ. ಈ ತಂತ್ರಜ್ಞಾನವನ್ನು ಬಳಸುವುದರಿಂದ, ಶತ್ರುಗಳು ನಮ್ಮ ನಡೆಗಳನ್ನು ಅರ್ಥಮಾಡಿಕೊಳ್ಳಲು ಸಾಧ್ಯವಾಗುವುದಿಲ್ಲ. ಮಾರ್ಫಿಂಗ್ ವಿಂಗ್ ತಂತ್ರಜ್ಞಾನದಲ್ಲಿನ ಪ್ರಮುಖ ಪ್ರಗತಿಯು ವಿಮಾನಗಳು ಕಾರ್ಯಾಚರಣೆಯ ಸಮಯದಲ್ಲಿ ತಮ್ಮ ರೆಕ್ಕೆಗಳ ಆಕಾರವನ್ನು ಕ್ಷಣಾರ್ಧದಲ್ಲಿ ಬದಲಾಯಿಸಲು ಅನುವು ಮಾಡಿಕೊಡುತ್ತದೆ.

## ಭಾರತೀಯ ಹಡಗುಗಳು 24 ದಿನಗಳಲ್ಲಿ ರಷ್ಯಾಗೆ




ನವದೆಹಲಿ : ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಭಾರತ ಭೇಟಿಯ ಸಮಯದಲ್ಲಿ, ಎರಡೂ ದೇಶಗಳು ಚೆನ್ನೈ-ವ್ಲಾಡಿವೋಸ್ಟಾಕ್ ಪೂರ್ವ ಕಾರಿಡಾರ್ ಬಗ್ಗೆ ಮಹತ್ವದ ಚರ್ಚೆ ನಡೆಸಿದವು. ಕೇವಲ 10,370 ಕಿ.ಮೀ ಉದ್ದದ ಈ ಕಾರಿಡಾರ್ ಇದಾಗಿದ್ದು, ಭಾರತೀಯ ಹಡಗುಗಳು ಸರಾಸರಿ 24 ದಿನಗಳಲ್ಲಿ ರಷ್ಯಾ ತಲುಪಲು ಅನುವು ಮಾಡಿಕೊಡುತ್ತದೆ. ಭಾರತದಿಂದ ರಷ್ಯಾದ ಸೇಂಟ್ ಪೀಟರ್ಸ್‌ಬರ್ಗ್‌ಗೆ ಸರಕುಗಳನ್ನು ಸಾಗಿಸಲು ಹಡಗುಗಳು ಸುಮಾರು 16,060 ಕಿ.ಮೀ ಪ್ರಯಾಣಿಸಬೇಕು. ಇದು ಸುಮಾರು 40 ದಿನಗಳನ್ನು ತೆಗೆದುಕೊಳ್ಳುತ್ತದೆ. ಈ ಹೊಸ ಮಾರ್ಗವು ಸು. 5,700ಕಿ.ಮೀ ಕಡಿಮೆ ದೂರದಲ್ಲಿದೆ.

## ಪ. ಬಂಗಾಳದ ಭಗವದ್ಗೀತಾ ಪಠಣ ಕಾರ್ಯಕ್ರಮದಲ್ಲಿ 5ಲಕ್ಷ ಮಂದಿ ಭಾಗಿ



ಕೊಲ್ಕತಾ : ಪಶ್ಚಿಮ ಬಂಗಾಳ ಬಾಬ್ರಿ ಮಸೀದಿಗೆ ಅಡಿಗಲ್ಲು ವಿಚಾರದಲ್ಲಿ ದೇಶಾದ್ಯಂತ ಸದ್ದು ಮಾಡಿದೆ. ಮಮತಾ ಬ್ಯಾನರ್ಜಿ ತೃಣಮೂಲ ಕಾಂಗ್ರೆಸ್‌ನಿಂದ ಅಮಾತುಗೊಂಡ ಶಾಸಕ ಮುರ್ಶಿದಾಬಾದ್‌ನಲ್ಲಿ ಬಾಬ್ರಿ ಮಸೀದಿಗೆ ಅಡಿಗಲ್ಲು ಹಾಕಿ ಭಾರಿ ವಿವಾದ ಸೃಷ್ಟಿಸಿದ್ದಾರೆ. ಆಯೋಧ್ಯೆ ಬಾಬ್ರಿ ಮಸೀದಿ ಧ್ವಂಸಗೊಂಡ ದಿನದಂತೆ ಅಡಿಗಲ್ಲು ಹಾಕಿ ವಿವಾದ ಹುಟ್ಟುಹಾಕಿದ್ದರು. ಈ ವಿವಾದದ ಮರುದಿನ ಕೋಲ್ಕತಾದ ಬ್ರಿಗೇಡ್ ಪರೇಡ್ ಮೈದಾನದಲ್ಲಿ ಪಶ್ಚಿಮ ಬಂಗಾಳದ ಹಿಂದೂಗಳ ಸಂಗಮವಾಗಿದೆ. ಭಗವದ್ಗೀತಾ ಪಠಣ ಕಾರ್ಯಕ್ರಮದಲ್ಲಿ 5ಲಕ್ಷ ಹಿಂದೂಗಳು ಪಾಲ್ಗೊಂಡಿದ್ದಾರೆ.

## SIR ಚುನಾವಣಾ ಆಯೋಗದಿಂದ ನಿರ್ವಹಿಸಲ್ಪಡುತ್ತದೆ : ಅಮಿತ್ ಶಾ



ನವದೆಹಲಿ : ಲೋಕಸಭೆಯಲ್ಲಿ ವಿರೋಧ ಪಕ್ಷದ ಸಂಸದರು ಮತಪತ್ರಗಳನ್ನು ಬಳಸಿ ಚುನಾವಣೆಗಳನ್ನು ನಡೆಸುವ ಮೂಲಕ EVM ಗಳನ್ನು ನಿರ್ಮೂಲನೆ ಮಾಡಬೇಕೆಂದು ಒತ್ತಾಯಿಸುತ್ತಿದ್ದಾರೆ. ಇದಕ್ಕೆ ಕೇಂದ್ರ ಸಚಿವರು SIR ಕೇವಲ ಒಳನುಸುಳುಕೋರರನ್ನು ತೆಗೆದು ಹಾಕುವ ಮತ್ತು ಸತ್ತ ಜನರ ಹೆಸರುಗಳನ್ನು ಅಳಿಸುವ ಸಾಧನವಾಗಿದೆ ಎಂದು ಹೇಳುತ್ತಿದ್ದಾರೆ. ಈ ಚರ್ಚೆಗೆ ಗೃಹ ಸಚಿವ ಅಮಿತ್ ಶಾ ಪ್ರತಿಕ್ರಿಯಿಸಿದ್ದು ಸಂಸತ್ತು SIR ಬಗ್ಗೆ ಚರ್ಚಿಸಲು ಸಾಧ್ಯವಿಲ್ಲ. ಏಕೆಂದರೆ ಅದು ಚುನಾವಣಾ ಆಯೋಗದಿಂದ ನಿರ್ವಹಿಸಲ್ಪಡುತ್ತದೆ. ಆದರೆ ಈಗ ಪ್ರಶ್ನೆಗಳು ಎದ್ದಿರುವುದರಿಂದ ನಾವು ಉತ್ತರಿಸಬೇಕಾಗುತ್ತದೆ ಎಂದರು.

## ಬಿ.ಜೆ.ಪಿ ನಾಯಕರಿಂದ ಪ್ರವಾಸದ ನಾಯಕ ಎಂದು ರಾಗಾಗೆ ಲೇವಡಿ



ನವದೆಹಲಿ : ಲೋಕಸಭಾ ಅಧಿವೇಶನ ನಡೆಯುತ್ತಿರುವಾಗಲೇ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಜರ್ಮನಿ ಪ್ರವಾಸಕ್ಕೆ ತೆರಳುತ್ತಿದ್ದಾರೆ. ಈ ಬಗ್ಗೆ ಬಿಜೆಪಿ ನಾಯಕರು ತೀವ್ರ ವಾಗ್ದಾಳಿ ನಡೆಸಿದ್ದು, ರಾಹುಲ್ ಗಾಂಧಿಯನ್ನು ಪ್ರವಾಸದ ನಾಯಕ, ಅರೆಕಾಲಿಕ ನಾಯಕ ಎಂದೆಲ್ಲ ಲೇವಡಿ ಮಾಡಿದ್ದರು. ಬಿಜೆಪಿಯ ಟೀಕೆಗೆ ಪ್ರಿಯಾಂಕಾ ಗಾಂಧಿ ತಿರುಗೇಟು ನೀಡಿದ್ದಾರೆ. 'ಪ್ರಧಾನಿ ಮೋದಿ ತಮ್ಮ ಕೆಲಸದ ಸಮಯದ ಅರ್ಧದಷ್ಟು ಭಾಗವನ್ನು ದೇಶದ ಹೊರಗೆ ಕಳೆಯುತ್ತಾರೆ. ಹೀಗಿದ್ದ ಮೇಲೆ ವಿರೋಧ ಪಕ್ಷದ ನಾಯಕನ ವಿದೇಶ ಪ್ರವಾಸದ ಬಗ್ಗೆ ಏಕೆ ಪ್ರಶ್ನೆಗಳನ್ನು ಎತ್ತುತ್ತಿದ್ದಾರೆ?' ಎಂದು ಪ್ರಿಯಾಂಕಾ ಗಾಂಧಿ ಪ್ರಶ್ನಿಸಿದ್ದಾರೆ.

## ನವಜೋತ್ ಸಿಂಗ್ ಸಿಧು ಪತ್ನಿ ಹೇಳಿಕೆಯಿಂದ ಕಾಂಗ್ರೆಸ್‌ನಲ್ಲಿ ಕೋಲಾಹಲ..!


PUNJAB PRADESH CONGRESS COMMITTEE

ಪಂಜಾಬ್ : ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿಯಾಗಲು 500 ಕೋಟಿ ರೂಪಾಯಿ ನೋಟು ಇರುವ ಸೂಟ್ ಕೇಸ್ ನೀಡಬೇಕು ಎಂಬ ನವಜೋತ್ ಸಿಂಗ್ ಸಿಧು ಪತ್ನಿ ನವಜೋತ್ ಕೌರ್ ಸಿಧು ಹೇಳಿಕೆ ಕಾಂಗ್ರೆಸ್‌ನಲ್ಲಿ ಕೋಲಾಹಲ ಸೃಷ್ಟಿಸಿದೆ. ದೇಶಾದ್ಯಂತ ಕಾಂಗ್ರೆಸ್ ತೀವ್ರ ಹಿನ್ನಡೆ ಅನುಭವಿಸಿದ್ದು, ಭಾರಿ ಟೀಕೆ ಎದುರಾಗುತ್ತಿದೆ.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## 'ದಿ ರೂಲರ್' ಟೀಸರ್ ಮೂಲಕ ರಾಜ್ ಬಿ. ಶೆಟ್ಟಿ ಅವರ ಪಾತ್ರ ಪರಿಚಯ

ಸಾರಥಿ ಫಿಲಂಸ್ ಲಾಂಛನದಲ್ಲಿ ಕೆ.ವಿ. ಸತ್ಯ ಪ್ರಕಾಶ್-ಹೇಮಂತ್ ಗೌಡ ಕೆ.ಎಸ್ ನಿರ್ಮಿಸಿರುವ, ಜಡೇಶ್ ಕೆ. ಹಂಪಿ ನಿರ್ದೇಶನದ ಹಾಗೂ ದುನಿಯಾ ವಿಜಯ್, ರಚಿತರಾಮ್ ಅಭಿನಯದ 'ಲ್ಯಾಂಡ್ ಲಾರ್ಡ್' ಚಿತ್ರದ ಸರ್ವೈವರ್ ಇತ್ತೀಚೆಗಷ್ಟೇ ಬಿಡುಗಡೆಯಾಗಿ ಜನಮನಸೂರೆಗೊಂಡಿದೆ. ಈಗ ಈ ಚಿತ್ರದ 'ದಿ ರೂಲರ್' ಟೀಸರ್ ಬಿಡುಗಡೆಯಾಗಿದೆ. 'ದಿ ರೂಲರ್' ಪಾತ್ರದಲ್ಲಿ ರಾಜ್ ಬಿ ಶೆಟ್ಟಿ ಅಭಿನಯಿಸಿದ್ದಾರೆ. "ದಿ ರೂಲರ್" ಟೀಸರ್ ನೋಡಿದ ರಾಜ್‌ಬಿ. ಶೆಟ್ಟಿ ಅವರ ಅಭಿಮಾನಿಗಳು ಫಿದಾ ಆಗಿದ್ದಾರೆ. ಟೀಸರ್ ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದ್ದು, ಮೆಚ್ಚುಗೆ ಪಡೆದುಕೊಳ್ಳುತ್ತಿದೆ. ಬಹುನಿರೀಕ್ಷಿತ ಈ ಚಿತ್ರ 2026ರ ಜನವರಿ 23 ರಂದು ಬಿಡುಗಡೆಯಾಗುತ್ತಿದೆ. ಟೀಸರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತ ನಾಡಿದರು. ನಾನು ಈ ಚಿತ್ರ ಒಪ್ಪಿಕೊಳ್ಳಲು ಮೊದಲ ಕಾರಣ ನಿರ್ದೇಶಕ ಜಡೇಶ್ ಅವರು ಎಂದು ಮಾತನಾಡಿದ ನಟ ರಾಜ್ ಬಿ ಶೆಟ್ಟಿ, ಏಕೆಂದರೆ ಒಬ್ಬ ನಿರ್ದೇಶಕ ಗೆಲ್ಲಲ್ಲೇಬೇಕು ಎಂದು ಬಯಸುವವನು ನಾನು. ಈ ಚಿತ್ರದಲ್ಲಿ ನನ್ನದು ಶೋಷಕ ವರ್ಗದಲ್ಲಿರುವಂತಹ, ಅಧಿಕಾರಕ್ಕಾಗಿ ಏನು ಬೇಕಾದರೂ ಮಾಡುವಂತಹ ವ್ಯಕ್ತಿಯ ಪಾತ್ರ. ಈ ಪಾತ್ರಕ್ಕೆ ಕೂದಲಿರಬೇಕು ಎಂದು ನಿರ್ದೇಶ ಕರು ಹೇಳಿದರು. ನಾನು ಬೇಕಾ ಎಂದು ಕೇಳಿದೆ.



ಏಕೆಂದರೆ ಕೆಲವು ವಿಗ್ ನನಗೆ ಸೆಟ್ ಆಗುವುದಿಲ್ಲ. ನಾನು ಹಾಗೂ ವಿಗ್ ಇಬ್ಬರೂ ಒಟ್ಟಿಗೆ ನಟಿಸಬೇಕು ಅಂತ ವಿಗ್ ಬೇಕು ಅಂತ ಹೇಳಿದೆ. ಹಾಗಾಗಿ ನನಗೆ ತಿಳಿದಿರುವವರ ಬಳಿ ವಿಗ್ ತರಿಸಿಕೊಳ್ಳುತ್ತೇನೆ. ಅವರು ನನಗೆ ಸರಿ ಹೊಂದುವ ವಿಗ್ ಕೊಡುತ್ತಾರೆ ಎಂದೆ. ಟೀಸರ್ ನೋಡಿದಾಗ ನನ್ನ ತಲೆಗೆ ವಿಗ್ ಸರಿ ಹೊಂದಿದೆ ಎನಿಸಿತು. ಕೋಲಾರ ಭಾಷೆಯಲ್ಲಿ ನನ್ನ ಸಂಭಾಷಣೆ ಇರುತ್ತದೆ. ದುನಿಯಾ ವಿಜಯ್ ಅವರ ಜೊತೆಗೆ ಮೊದಲ ಬಾರಿಗೆ ನಟಿಸಿದ್ದೇನೆ ಎಂದರು.

## ಡೆವಿಲ್ ಜೊತೆಗೆ ಕುಡುಕನ ಎಂಟ್ರಿ.. ಪಿಯೊಟ್ ರಿಲೀಸ್

ಪಿವಟ್ ಅಂತ ಯಾರನ್ನ ಕರೆಯುತ್ತಾರೆ ಅನ್ನೋದು ನಿಮಗೆಲ್ಲಾ ಗೊತ್ತಿರುವ ವಿಚಾರವೇ. ಕುಡಿಯುವುದಕ್ಕೆ ಸಮಯವೇ ಬೇಕಿಲ್ಲ. ಸದಾ ಕುಡಿಯುವುದರ ಕಡೆಗೆ ಗಮನ ಹರಿಸುವವರನ್ನ ಪಿಯೊಟ್ ಅಂತಾರೆ. ಈ ರೀತಿ ಕುಡಿಯುವುದರಿಂದ ಏನೆಲ್ಲಾ ಸಮಸ್ಯೆ ಆಗುತ್ತೆ, ಕುಡಿತ ಬಿಡುವುದಕ್ಕೆ ಮನಸ್ಸು ಮಾಡುದಾಗ ಎಷ್ಟೆಲ್ಲಾ ಕಷ್ಟವಾಗುತ್ತೆ ಎಂಬ ಸಂದೇಶವನ್ನಿತ್ತು ಪಿಯೊಟ್ ಸಿನಿಮಾ ಬರ್ತಾ ಇದೆ. ಇದೆ ಡಿಸೆಂಬರ್ 12ಕ್ಕೆ ರಿಲೀಸ್ ಆಗ್ತಾ ಇದೆ. ಇಡೀ ಚಿತ್ರತಂಡ ಮಾಧ್ಯಮದವರ ಮುಂದೆ ತಮ್ಮ ಸಿನಿಮಾದ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ. ಜೊತೆಗೆ ಡೆವಿಲ್ ನೋಡಿದ ಮೇಲೆ ನಮ್ಮನ್ನು ಸ್ವಲ್ಪ ಬೆಳೆಸಿ ಎಂದು ಮನವಿ ಮಾಡಿದ್ದಾರೆ. ಆಡಿಯೋ ರೈಟ್ಸ್ ಅನ್ನು ಲಹರಿ ಕಂಪನಿ ತೆಗೆದುಕೊಂಡಿದ್ದು ಸಿನಿಮಾ ಬಗ್ಗೆ ಲಹರಿ ವೇಲು ಹೇಳಿದ್ದು ಹೀಗೆ, ರಿಯಾಬು ಸೆಂಟರ್‌ಗೆ ಕುಡಿತಕ್ಕರ ಅಡಿಕ್ಟ್ ಆದವರನ್ನ ಕರೆದುಕೊಂಡು ಹೋಗಿ, ಅವರಿಗೆ ಮರುಜೀವನ ಕೊಡಿಸುವ ಪ್ರಯತ್ನ ಮಾಡ್ತಾರೆ. ಅಲ್ಲಿ ಹೋದವರಿಗೆ ಅಲ್ಲಿನ ಕಷ್ಟ ಗೊತ್ತಾಗುತ್ತೆ. ಒಳ್ಳರ ಸಿನಿಮಾ ಮಾಡಿದ್ದೀರಾ. ನಾನು ಹಾಡುಗಳನ್ನ ಕೇಳಿದ್ದೆ ಮೆಸೇಜ್ ಇಷ್ಟು ಚೆನ್ನಾಗಿದೆ ಅಂತ ಗೊತ್ತಿರಲಿಲ್ಲ. ಈ ರೀತಿಯ ಸಿನಿಮಾ ಬೇಕಿತ್ತು ಎಲ್ಲರಿಗೂ ಆಲ್ ದಿ ಬೆಸ್ಟ್ ಅಂದ್ರು. ವಿತರಕ ಪ್ರಶಾಂತ್ ಮಾತನಾಡು, ಸಿನಿಮಾ ನೋಡಿದ ಮೇಲೆ ತುಂಬಾ ಇಷ್ಟವಾಗಿ ಡಿಸ್ಟ್ರಿಬ್ಯೂಷನ್‌ಗೆ ಒಪ್ಪಿಕೊಂಡೆವು. ನಿರ್ದೇಶಕ ಕಾರ್ತಿಕ್ ರಾಜ್ ಅವರು ಭೇಟಿ ಮಾಡಿದ ಮೇಲೆ ದರ್ಶನ್ ಅವರ ಡೆವಿಲ್ ರಿಲೀಸ್ ಟೈಮ್ ನಲ್ಲಿಯೇ ನಮ್ಮ ಸಿನಿಮಾ ರಿಲೀಸ್ ಮಾಡ್ತಾ ಇದ್ದೀವಿ ಅಂದ್ರು. ಇವರ ಧೈರ್ಯ ಏನು ಅಂತ ಎಲ್ಲರಿಗೂ ಪ್ರಶ್ನೆ ಮೂಡುತ್ತೆ. ದರ್ಶನ್ ಸರ್‌ಗೆ ಕಂಪೇರ್ ಮಾಡಿಕೊಳ್ಳುವುದಕ್ಕೆ ಆಗಲ್ಲ. ನಮ್ಮ ಕಂಟೆಂಟ್ ಬೇರೆ ಇದೆ. ಡೆವಿಲ್‌ನಿಂದ ಆಚೆಗೂ ನಮ್ಮ ಸಿನಿಮಾಗೂ ಒಂದಷ್ಟು ಥಿಯೇಟರ್ ಗಳು ಸಿಕ್ಕಿವೆ. 20-25 ಸಿಂಗಲ್ ಸ್ಕ್ರೀನ್, 15 ಮಲ್ಟಿಪ್ಲೆಕ್ಸ್ ಸಿಗುತ್ತೆ ಎಂದಿದ್ದಾರೆ.



## ಸುನಯನ 'ಮೌನ ರಾಗ'ಕ್ಕೆ ಸೆಲೆಬ್ರಿಟಿಗಳ ಸಾಥ್

ಪತ್ರಕರ್ತೆ ಹಾಗೂ ವಿಮರ್ಶಕಿ ಸುನಯನ ಸುರೇಶ್ ಈಗ ನಿರ್ದೇಶಕಿಯಾಗಿದ್ದಾರೆ. ಇಪ್ಪತ್ತು ನಿಮಿಷಗಳ "ಮೌನ ರಾಗ" ಎಂಬ ಕಿರುಚಿತ್ರವನ್ನು ನಿರ್ಮಿಸಿ, ನಿರ್ದೇಶಿಸಿದ್ದಾರೆ. ಬೆಂಗಳೂರು ಅಂತರರಾಷ್ಟ್ರೀಯ ಕಿರುಚಿತ್ರೋತ್ಸವದಲ್ಲಿ ಪ್ರದರ್ಶನಗೊಂಡಿರುವ ಈ ಕಿರುಚಿತ್ರ ಪ್ರಶಸ್ತಿಯ ಜೊತೆಗೆ ಅಪಾರ ಮೆಚ್ಚುಗೆಯನ್ನು ಪಡೆದುಕೊಂಡಿದೆ. ಇತ್ತೀಚೆಗೆ ಈ ಕಿರುಚಿತ್ರದ ವಿಶೇಷ ಪ್ರದರ್ಶನ ಬೆಂಗಳೂರಿನಲ್ಲಿ ನಡೆಯಿತು. ಅಶ್ವಿನಿಪುನೀತ್‌ರಾಜಕುಮಾರ್, ಪ್ರಿಯಾಂಕಾ ಉಪೇಂದ್ರ, ಕೆ.ಎಂ.ಚೈತನ್ಯ, ಪನ್ನಗಾಭರಣ, ಭಾವನಾ ರಾವ್, ಮೇಘನಾ ಗಾಂವ್ಕರ್, ಮಾನ್ವಿತ ಕಾಮತ್, ಪ್ರವೀಣ್ ತೇಜ್, ಶುಭ್ರ ಅಯ್ಯಪ್ಪ, ರಕ್ಷ್, ಪ್ರಭು ಮುಂಡ್ಕರ್, ದಿಶಾ ಮದನ್ ಸೇರಿದಂತೆ ಸ್ಯಾಂಡಲ್ ವುಡ್‌ನ ಅನೇಕ ಸೆಲೆಬ್ರಿಟಿಗಳು "ಮೌನ ರಾಗ"ದ ವಿಶೇಷ ಪ್ರದರ್ಶನಕ್ಕೆ ಆಗಮಿಸಿ, ಸುನಯನ ಅವರ ಚೊಚ್ಚಲ ಪ್ರಯತ್ನಕ್ಕೆ ಮನಸ್ಸಾರೆ ಹಾರೈಸಿದರು. ನಂತರ ತಂಡದ ಸದಸ್ಯರು ಮಾತನಾಡಿದರು. ಕಿರುಚಿತ್ರದಲ್ಲಿ ನಟಿಸಿರುವ ನಟಿ ಶ್ರುತಿ ಹರಿಹರನ್ ಮಾತನಾಡಿ, ಸುನಯನ ಅವರು ನನಗೆ ಬಹಳ ವರ್ಷಗಳ ಪರಿಚಯ. ಈಗ ಅವರು ನಿರ್ದೇಶಕಿಯಾಗಿರುವುದು ಖುಷಿಯಾಗಿದೆ. ಹೆಣ್ಣು ಮಕ್ಕಳ ದಿನನಿತ್ಯದ ಬವಣೆಗಳನ್ನು ಸುನಯನ ಇಪ್ಪತ್ತು ನಿಮಿಷಗಳಲ್ಲಿ ಮನಮುಟ್ಟುವಂತೆ ತೋರಿಸಿದ್ದಾರೆ. ನಿರ್ದೇಶನದ ಬಗ್ಗೆ ಆಸಕ್ತಿ ಹೊಂದಿರುವವರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಕಿರುಚಿತ್ರ ಸೂಕ್ತ ವೇದಿಕೆ. ತಾಯಿ-ಮಗನ ಸೆಂಟಿಮೆಂಟ್ ಸನ್ನಿವೇಶಗಳು ಕೂಡ ಮನಸ್ಸಿಗೆ ಹತ್ತಿರವಾಗುತ್ತದೆ ಎಂದರು. "ಮೌನ ರಾಗ" ನನ್ನ ಮೊದಲ ನಿರ್ದೇಶನದ ಕಿರುಚಿತ್ರ. ಬೆಂಗಳೂರು ಅಂತರರಾಷ್ಟ್ರೀಯ ಕಿರುಚಿತ್ರೋತ್ಸವದಲ್ಲಿ ಪ್ರದರ್ಶನಗೊಂಡು ಪ್ರಶಸ್ತಿ ಹಾಗೂ ಮೆಚ್ಚುಗೆ ಪಡೆದುಕೊಂಡಿದೆ ಎಂದರು.



## L A ಪ್ರೊಡಕ್ಷನ್ಸ್ ನಿರ್ಮಾಣದ ಚಿತ್ರಕ್ಕೆ ವಿಜಯ್ ನಿರ್ದೇಶನ

ಮಾಲೂರಿನ ಹೇಮಂತ್ ಕುಮಾರ್ "ಆಲ್ಫಾ #MEN LOVE VENGEANCE* ಚಿತ್ರದ ಮೂಲಕ ನಾಯಕನಾಗಿ ಚಿತ್ರರಂಗಕ್ಕೆ ಪದಾರ್ಪಣೆ ಮಾಡುತ್ತಿದ್ದಾರೆ. L A ಪ್ರೊಡಕ್ಷನ್ಸ್ ಲಾಂಛನದಲ್ಲಿ ಆನಂದ್ ಕುಮಾರ್ ಅವರು ನಿರ್ಮಿಸಿರುವ ಈ ಚಿತ್ರವನ್ನು 'ಗೀತಾ' ಹಾಗೂ 'ಗುರುದೇವ ಹೊಯ್ಸಳ' ಚಿತ್ರಗಳ ನಿರ್ದೇಶಕ ವಿಜಯ್ ನಿರ್ದೇಶಿಸಿದ್ದಾರೆ. ಇತ್ತೀಚೆಗೆ ಈ ಚಿತ್ರದ ಟೀಸರ್ ಬಿಡುಗಡೆ ಸಮಾರಂಭ ಅದ್ದೂರಿಯಾಗಿ ನಡೆಯಿತು. ಲಹರಿ ವೇಲು ಟೀಸರ್ ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನನಗೆ ಮಾಸ್ತಿ ಅವರ ಮೂಲಕ ನಾಯಕ ಹೇಮಂತ್ ಕುಮಾರ್ ಅವರ ಪರಿಚಯವಾಯಿತು. ಅವರಿಗಿರುವ ಸಿನಿಮಾ ಬಗ್ಗೆಗಿನ ಆಸಕ್ತಿ ಬಹಳ ಇಷ್ಟವಾಯಿತು. ಹೇಮಂತ್ ಕುಮಾರ್ ಅವರು ಒಂದೊಳ್ಳೆ ಕಥೆ ಇದ್ದರೆ ಸಿನಿಮಾ ಮಾಡೋಣ ಎಂದು ಹೇಳಿದರು. ಲವ್ ಜಾನರ್‌ನ ಚಿತ್ರ ಬೇಡ ಎಂದರು. ಆಗ ಈ "ಆಲ್ಫಾ #MEN LOVE VENGEANCE* ಚಿತ್ರದ ಕಥೆ ಹೇಳಿದೆ. ಫೆಬ್ರವರಿ ವೇಳೆಗೆ ತೆರೆಗೆ ತರುವ ಪ್ರಯತ್ನ ನಡೆಯುತ್ತಿದೆ. ಇದು ಆಕ್ಷನ್ ಥ್ರಿಲ್ಲರ್ ಚಿತ್ರ ಮಾತ್ರವಲ್ಲ. ಸೆಂಟಿಮೆಂಟ್ ಸೇರಿದಂತೆ ನೋಡುಗರಿಗೆ ಬೇಕಾದ ಎಲ್ಲಾ ಅಂಶಗಳಿರುವ ಚಿತ್ರ. ಇದು 3 ಜನ ಅಪ್ಪಂದಿರ ಹಾಗೂ 3 ಜನ ಮಕ್ಕಳ ಸುತ್ತ ನಡೆಯುವ ಕಥೆ. ಅಪ್ಪನ ತಂಟೆಗೆ ಯಾರಾದರೂ ಬಂದರೆ, ಮಕ್ಕಳ "ಪ್ರತಿಕಾರ" ಹೇಗಿರುತ್ತದೆ ಎಂದು ತಿಳಿಸುವ ಕಥೆಯೂ ಹೌದು. ನಾಯಕನಾಗಿ ನಟಿಸಿರುವ ಹೇಮಂತ್ ಕುಮಾರ್, ನಾಯಕನಾಗಲೂ ಬೇಕಾಗಿರುವ ಪೂರ್ವಸಿದ್ದತೆಗಳನ್ನು ಮಾಡಿಕೊಂಡು ಬಂದಿದ್ದರು.



## 'ಗುಮ್ಮಡಿ ನರಸಯ್ಯ' ಬಯೋಪಿಕ್ ಚಿತ್ರಕ್ಕೆ ಮುಹೂರ್ತ

ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ನಟಿಸುತ್ತಿರುವ ಮೊದಲ ತೆಲುಗು ಸಿನಿಮಾ ಗುಮ್ಮಡಿ ನರಸಯ್ಯ. 5 ಬಾರಿ ಶಾಸಕರಾಗಿ ಆಯ್ಕೆಯಾಗಿ ಸರಳ ಜೀವನ ನಡೆಸಿದ ಆಂಧ್ರದ ಮಾಜಿ ಶಾಸಕ ಗುಮ್ಮಡಿ ನರಸಯ್ಯ ಅವರ ಜೀವನಾಧಾರಿತ ಸಿನಿಮಾ ಇದಾಗಿದೆ. ಈ ಚಿತ್ರದ ಮುಹೂರ್ತ ಸಮಾರಂಭ ಇಂದು ತೆಲಂಗಾಣದ ಪಾಲ್ವಂಚದಲ್ಲಿ ಅದ್ದೂರಿಯಾಗಿ ನಡೆದಿದೆ. ಗುಮ್ಮಡಿ ನರಸಯ್ಯ ಸಿನಿಮಾದ ಮುಹೂರ್ತದಲ್ಲಿ ಪಾತ್ರವರ್ಗದ ಜೊತೆಗೆ ಸಚಿವ ಕೋಮಟಿರೆಡ್ಡಿ ವೆಂಕಟ್ ರೆಡ್ಡಿ, ಕವಿತಾ, ಮಲ್ಲು ಭಟ್ಟಿ ವಿಕ್ರಮಾರ್ಕ ಅವರ ಪತ್ನಿ ನಂದಿನಿ ಮಲ್ಲು ಮತ್ತು ರಾಜಕೀಯ ಗಣ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಗೀತಾ ಶಿವರಾಜ್ ಕುಮಾರ್ ಚಿತ್ರಕ್ಕೆ ಕ್ಲಾಪ್ ಮಾಡಿದರು, ಸಚಿವ ಕೋಮಟಿರೆಡ್ಡಿ ವೆಂಕಟ್ ರೆಡ್ಡಿ ಕ್ಯಾಮೆರಾ ಸ್ವಿಚ್‌ಆನ್ ಮಾಡಿದರು. ಮಲ್ಲು ಭಟ್ಟಿ ವಿಕ್ರಮಾರ್ಕ ಅವರ ಪತ್ನಿ ನಂದಿನಿ ಸ್ಕ್ರಿಪ್ಟ್ ನಿರ್ದೇಶಕರಿಗೆ ಹಸ್ತಾಂತರಿಸಿದರು. ಮುಹೂರ್ತದ ಬಳಿಕ ಶಿವಣ್ಣ ಮಾತನಾಡಿ, "ಇಂದು ನಾನು ಅಂತಹ ಉದಾತ್ತ ಮನುಷ್ಯನನ್ನು ಚಿತ್ರಿಸಲು ನಿಜವಾಗಿಯೂ ಸಂತೋಷ ಮತ್ತು ಹೆಮ್ಮೆಪಡುತ್ತೇನೆ. ಈ ಅವಕಾಶಕ್ಕಾಗಿ ಪರಮೇಶ್ವರ್ ಮತ್ತು ಎನ್. ಸುರೇಶ್ ರೆಡ್ಡಿಗೆ ನನ್ನ ಧನ್ಯವಾದಗಳು. ನನ್ನ ತಂದೆ ಕೂಡ ನರಸಯ್ಯನಂತೆಯೇ ಜನಸೇವೆ ಸಲ್ಲಿಸಿದ್ದಾರೆ ಎಂದರು.



## 'ಪೀಟರ್' ಚಿತ್ರದ ತಾಯೆ ತಾಯೇ ಎಮೋಷನ್ ಸಾಂಗ್ ಅನಾವರಣ

ದೂರದರ್ಶನ ಸಿನಿಮಾ ಖ್ಯಾತಿಯ ನಿರ್ದೇಶಕ ಸುಕೇಶ್ ಶೆಟ್ಟಿ ಅವರ ಎರಡನೇ ಪ್ರಯತ್ನ ಪೀಟರ್. ಟೈಟಲ್ ಹಾಡಿನ ಮೂಲಕ ಕುತೂಹಲ ಹೆಚ್ಚಿಸಿದ್ದ ಪೀಟರ್ ಸಿನಿಮಾದ ಟೀಸರ್ ಇತ್ತೀಚೆಗೆ ಬಿಡುಗಡೆಯಾಗಿ ಎಲ್ಲೆಡೆ ಅದ್ಭುತ ಪ್ರಶಂಸೆ ಕಂಡಿತ್ತು, ಸಿನಿಮಾ ಮತ್ತು ತಂಡದ ಮೇಲಿನ ಭರವಸೆ ಈಗ ಮತ್ತಷ್ಟು ಹೆಚ್ಚಾಗಿದೆ. ಈಗಾಗಲೇ ಸುಂದರಿ ಸುಂದರಿ ಎಂಬ ಗೀತೆಗೆ ಒಳ್ಳೆ ಪ್ರತಿಕ್ರಿಯೆ ಸಿಕ್ಕಿದ್ದು, ಇದೀಗ ಥಿಂಕ್ ಮ್ಯೂಸಿಕ್ ಯೂಟ್ಯೂಬ್‌ನಲ್ಲಿ ಎರಡೇ ಹಾಡು "ತಾಯೇ ತಾಯೇ" ರಿಲೀಸ್ ಆಗಿದೆ. ತಾಯೇ ತಾಯೇ ಹಾಡು ಐದು ಭಾಷೆಯಲ್ಲಿ ಬಿಡುಗಡೆಯಾಗಿದೆ. ತಾಯಿ ಮಗನ ಬಾಂಧವ್ಯದ ಈ ಗೀತೆಗೆ ಕನ್ನಡದಲ್ಲಿ ಸುಕೀರ್ತ್ ಶೆಟ್ಟಿ ಸಾಹಿತ್ಯ ಒದಗಿಸಿದ್ದು, ಮಲಯಾಳಂ ಹೊರತುಪಡಿಸಿ ಕನ್ನಡ, ಹಿಂದಿ, ತೆಲುಗು ಹಾಗೂ ತಮಿಳು ಭಾಷೆಯಲ್ಲಿ ರಿತ್ವಿಕ್ ಮುರುಳಿಧರ್ ಸಂಗೀತ ನಿರ್ದೇಶನ ಮಾಡುವುದರ ಜೊತೆಗೆ ಧ್ವನಿಯಾಗಿದ್ದಾರೆ. ಹಿಂದಿ ಭಾಷೆಯಲ್ಲಿ ಕೂಡ ಈ ಹಾಡು ರಿಲೀಸ್ ಆಗಿರೋದು ವಿಶೇಷ.



## ಚಿತ್ರೀಕರಣ ಮುಗಿಸಿದ 'ಮಹಾಕವಿ'

ಬೆಳಗಾವಿಯ ಶ್ರೀ ಪ್ರಭು ಯತ್ನಟ್ಟಿಯವರು ಪಿ.ಆರ್.ಅಸೋಸಿಯೇಟ್ಸ್ ಸಂಸ್ಥೆಯ ಮೂಲಕ ನಿರ್ಮಿಸುತ್ತಿರುವ ಪ್ರೊ. ಬರಗೂರು ರಾಮಚಂದ್ರಪ್ಪನವರು ನಿರ್ದೇಶಿಸಿರುವ 'ಮಹಾಕವಿ' ಕನ್ನಡ ಸಿನಿಮಾದ ಚಿತ್ರೀಕರಣವು ಮುಕ್ತಾಯಗೊಂಡಿದೆ.ಈಗ ಚಿತ್ರೀಕರಣೋತ್ತರ ಕೆಲಸಗಳು ನಡೆಯುತ್ತಿವೆ. 'ಮಹಾಕವಿ'ಯು ಬರಗೂರರ ನಿರ್ದೇಶನದ ಇಪ್ಪತ್ತೈದನೇ ಚಿತ್ರ ಎನ್ನುವುದು ಒಂದು ವಿಶೇಷ. 'ಮಹಾಕವಿ' ಚಿತ್ರವು ಕನ್ನಡದ ಆದಿಕವಿಯೆಂದೇ ಪ್ರಸಿದ್ಧನಾದ ಪಂಪನ ಕಾವ್ಯಗಳನ್ನು ಆಧರಿಸಿದೆ. ಇದು ಪಂಪನ ಜೀವನ ಚರಿತ್ರೆಯಲ್ಲ. ಪಂಪನ ಪರಿಕಲ್ಪನೆಗಳ ದೃಶ್ಯರೂಪಕ. ಅಂದರೆ ಪಂಪ ಮಹಾಕವಿ ತನ್ನ ಕಾವ್ಯಗಳಲ್ಲಿ ಪ್ರತಿಪಾದಿಸಿದ ಪರಿಕಲ್ಪನೆಗಳಿಗೆ ಕಥನ ರೂಪ ಕೊಡಲಾಗಿದೆ. ಪಂಪ ಮಹಾಕವಿಯು ರಾಜನ ಆಸ್ಥಾನದಲ್ಲಿದ್ದೂ ಸೃಜನಶೀಲ ಸ್ವಾತಂತ್ರ್ಯವನ್ನು ಸಮರ್ಥಿಸಿಕೊಂಡು ಬರೆದ ಕವಿ. ಪ್ರಭುತ್ವ ಮತ್ತು ಸೃಜನಶೀಲ ಸ್ವಾತಂತ್ರ್ಯವನ್ನು ಕುರಿತ ಪಂಪನ ಪರಿಕಲ್ಪನೆಯು ಇಂದಿಗೂ ಪ್ರಸ್ತುತವಾಗಿದೆ. ಅಂತೆಯೇ ಕನ್ನಡ ಸಾಹಿತ್ಯದಲ್ಲಿ ಜಾತಿ ವ್ಯವಸ್ಥೆಯನ್ನು ವಿರೋಧಿಸಿದ ಮೊಟ್ಟಮೊದಲ ಕವಿ ಪಂಪ. 'ಆದಿಪುರಾಣ'ದಲ್ಲಿ 'ಮನುಷ್ಯ ಜಾತಿ ತಾನೊಂದೆ ವಲಂ' ಎಂದು ಪ್ರತಿ ಪಾದಿಸಿದ ಪಂಪ, 'ವಿಕ್ರಮಾರ್ಜುನ ವಿಜಯ'ದಲ್ಲಿ ಕರ್ಣನ ಪಾತ್ರದ ಮೂಲಕ ಜಾತಿ ವ್ಯವಸ್ಥೆಯನ್ನು ವಿರೋಧಿಸಿದ್ದಾನೆ.



## 2+ ಚಿತ್ರದ 'ನನಗೂ ನಿನಗೂ' ಹಾಡು 34 ಭಾಷೆಗಳಲ್ಲಿ ಬಿಡುಗಡೆ

'ಖುಷಿಯಾಗಿದೆ ಏಕೋ', 'ಕಣ್ಣಲ್ಲೇ ನನ್ನ ಚಿತ್ರ ಬರೆದೋನು' ಹೀಗೆ ಕನ್ನಡ ಚಿತ್ರರಂಗಕ್ಕೆ ಸಾಕಷ್ಟು ಮೆಲೋಡಿ ಹಾಡುಗಳನ್ನು ನೀಡಿದ ಸಂಗೀತ ನಿರ್ದೇಶಕ ಅಭಿಮನ್ ರಾಯ್ ಇದೀಗ ಒಂದು ದಾಖಲೆಯ ಹೆಜ್ಜೆ ಇಟ್ಟಿದ್ದಾರೆ. ಅವರು 2+ ಚಿತ್ರಕ್ಕೆ ಸಂಗೀತ ನಿರ್ದೇಶನ ಮಾಡುತ್ತಿದ್ದು, ಈ ಚಿತ್ರದ ಹಾಡೊಂದನ್ನು 34 ಭಾಷೆಗಳಲ್ಲಿ ಹೊರತಂದಿದ್ದಾರೆ. ಚಿತ್ರರಂಗದ ಇತಿಹಾಸದಲ್ಲೇ ಇಂಥದ್ದೊಂದು ಸಾಹಸವನ್ನು ಯಾರೊಬ್ಬರೂ ಸಹ ಮಾಡಿಲ್ಲ. ಒಟ್ಟು 34 ಭಾಷೆಯಲ್ಲಿ ಮೂಡಿ ಬಂದಿರುವ ಈ ಹಾಡಿಗೆ ಪ್ರಸಿದ್ಧ ಗಾಯಕರೇ ದನಿಯಾಗಿದ್ದಾರೆ.



## ತೀರ್ಥರೂಪ ತಂದೆಯವರಿಗೆ ಟ್ರೇಲರ್ ರಿಲೀಸ್

ಹೊಂದಿಸಿ ಬರೆಯಿರಿ ಸಿನಿಮಾ ಮೂಲಕ ಬದುಕನ್ನು ಬಂದಂತೆ ಸ್ವೀಕರಿಸಿ ಎಂಬ ಸಂದೇಶ ಕೊಟ್ಟಿರುವ ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ್. ಈಗ ಅವರು ಬದುಕಿನಲ್ಲಾದ ಒಂದು ಚಿಕ್ಕ ತಪ್ಪು ಕುಟುಂಬವನ್ನು ಎಷ್ಟು ದೂರು ಮಾಡುತ್ತದೆ. ಅದು ಒಂದಾಗಲು ಎಷ್ಟು ಸಮಯ ತೆಗೆದುಕೊಳ್ಳುತ್ತದೆ ಎಂಬ ಆಶಯದ ಜೊತೆಗೆ ತಂದೆ ತಾಯಿ ಮೌಲ್ಯಗಳನ್ನು ಸಾರುವ ಕಂಟೆಂಟ್‌ನೊಂದಿಗೆ ಬಂದಿದ್ದಾರೆ. ಈ ಕಥೆಗೆ ಚಿತ್ರಕ್ಕೆ ತೀರ್ಥರೂಪ ತಂದೆಯವರಿಗೆ ಎಂಬ ಅಪ್ಪಟ ಟೈಟಲ್ ಇಟ್ಟಿದ್ದಾರೆ. ಈ ಸಿನಿಮಾದ ಟ್ರೇಲರ್ ಬಿಡುಗಡೆಯಾಗಿದೆ. ಬೆಂಗಳೂರಿನ ಎಂಎಂಬಿ ಲೆಗಸಿಯಲ್ಲಿ ನಿನ್ನೆ ಟ್ರೇಲರ್ ಲಾಂಚ್ ಕಾರ್ಯಕ್ರಮ ಜರುಗಿತು. ಹೊಂದಿಸಿ ಬರೆಯಿರಿ ಚಿತ್ರತಂಡ ತೀರ್ಥರೂಪ ತಂದೆಯವರಿಗೆ ಟ್ರೇಲರ್ ಬಿಡುಗಡೆ ಮಾಡಿ ಶುಭ ಹಾರೈಸಿದರು. ಬಳಿಕ ಹಿರಿಯ ನಟಿ ಸಿತಾರಾ ಮಾತನಾಡಿ, ನನಗೆ ಚಿತ್ರದಲ್ಲಿ ಒಂದೊಳ್ಳೆ ಪಾತ್ರ ಕೊಟ್ಟಿದ್ದಾರೆ. ನಿಮಗೆ ನನ್ನ ಪಾತ್ರ ಇಷ್ಟವಾಗುತ್ತದೆ. ಕಥೆ ಪ್ರೇಕ್ಷಕರ ಹೃದಯ ತಟ್ಟುತ್ತದೆ. ಕನ್ನಡದಲ್ಲಿ ತುಂಬಾ ದಿನಗಳ ಬಳಿಕ ಬಣ್ಣ ಹಚ್ಚಿದ್ದೇನೆ ಎಂದರು.



## ಡಿಸೆಂಬರ್ 15ರಂದು ಮಲ್ಟಿಸ್ಟಾರರ್ '45' ಟ್ರೇಲರ್ ಬಿಡುಗಡೆ

ಕರುನಾಡ ಚಕ್ರವರ್ತಿ ಶಿವರಾಜಕುಮಾರ್, ರಿಯಲ್ ಸ್ಟಾರ್ ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಪ್ರಮುಖಪಾತ್ರದಲ್ಲಿ ನಟಿಸಿರುವ, ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಮೊದಲ ನಿರ್ದೇಶನದ ಹಾಗೂ ಸೂರಜ್ ಪ್ರೊಡಕ್ಷನ್ ಲಾಂಛನದಲ್ಲಿ ರಮೇಶ್ ರೆಡ್ಡಿ ಅವರು ನಿರ್ಮಿಸಿರುವ ಕನ್ನಡದ ಬಹುನಿರೀಕ್ಷಿತ ಪ್ಯಾನ್ ಇಂಡಿಯಾ ಚಿತ್ರ ಮಲ್ಟಿಸ್ಟಾರರ್ "45" ಚಿತ್ರ ಡಿ.25 ಕ್ರಿಸ್ಮಸ್ ದಿನದಂದು ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಅದಕ್ಕೂ ಮುನ್ನ ಡಿ.15ರಂದು ಟ್ರೇಲರ್ ಅನಾವರಣವಾಗಲಿದೆ. ಟ್ರೇಲರ್ ಬಿಡುಗಡೆ ಸಮಾರಂಭವನ್ನು ವಿಭಿನ್ನವಾಗಿ ಅಯೋಜಿಸಲು ಚಿತ್ರತಂಡ ನಿರ್ಧರಿಸಿದೆ. ಈ ಕುರಿತು ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ನಿರ್ಮಾಪಕ ರಮೇಶ್ ರೆಡ್ಡಿ, ನಿರ್ದೇಶಕ ಅರ್ಜುನ್ ಜನ್ಯ ಟ್ರೇಲರ್ ಇವೆಂಟ್ ಬಗ್ಗೆ ಮಾಹಿತಿ ನೀಡಿದರು.






ವಿಭಿನ್ನ ಕಥಾಹಂದರದ "ಕ್ಲಾಂತ"

## ಮಾರ್ಕ್ ಟ್ರೇಲರ್ ರಿಲೀಸ್.. ಮಿಂಚಿದ ಕಿಚ್ಚ..



ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಅವರು ನಟಿಸಿರುವ ಸಿನಿಮಾ ಮಾರ್ಕ್ ಟ್ರೇಲರ್ ರಿಲೀಸ್ ಆಗಿದೆ. ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ನಡೆಯಿತು. ಈ ವೇಳೆ ಇಡೀ ತಂಡ ಭಾಗಿಯಾಗಿತ್ತು. ಟ್ರೇಲರ್ ಬಿಡುಗಡೆ ಬಳಿಕ ನಟ ಕಿಚ್ಚ ಸುದೀಪ್ ಮಾತನಾಡಿ, ವಿಜಯ್ ಹಾಗೂ ಚಂದ್ರು ಮಲಗಿಕೊಳ್ಳದೇ ಈ ಚಿತ್ರಕ್ಕೆ ಕೆಲಸ ಮಾಡಿದ್ದಾರೆ. ನನ್ನ ಮಾತಿಗೆ ಧೃಡವಾಗಿ ನಿಂತಿದ್ದು ನನ್ನ ಇಡೀ ತಂಡ. ಟೆಕ್ನಿಕಲ್ ಟೀಂ ಹಾಗೂ ಇಡೀ ಕಲಾವಿದರು. ಡಿಸೆಂಬರ್‌ನಲ್ಲಿ ಬರುತ್ತಿರುವ ಸೂಪರ್ ಸ್ಟಾರ್ಸ್ ಸಿನಿಮಾಗಳಿಗೆ ಉತ್ತರಿಸಿದ ಕಿಚ್ಚ, ದೀಪಾವಳಿ ಬಂದರೆ ಕರ್ನಾಟಕದಲ್ಲಿ ಎಲ್ಲರ ಮನೆಯಲ್ಲಿಯೂ ಹಬ್ಬ. ಯಾವತ್ತು ತರಕಾರಿ, ಅಡುಗೆ ಕಮ್ಮಿಯಾಗಿಲ್ಲ. ಇನ್ನೂ ಸೀಟ್‌ಗಳು ಹೇಗೆ ಕಡಿಮೆಯಾಗುತ್ತವೆ. ಜನ ಬರದೇ ಇರ್ತಾರಾ..? ಎಂದು ಸಿನಿಮಾ ಜರ್ನಿ ಬಗ್ಗೆ ಮಾತನಾಡಿದರು.

## ತೆರೆಯಲ್ಲಿ ಅಬ್ಬರಿಸಿದ ದರ್ಶನ್ "ದಿ ಡೆವಿಲ್"



ಶ್ರೀ ಜೈ ಮಾತ ಕಂಬೈನ್ಸ್ ಲಾಂಛನದಲ್ಲಿ ಅದ್ದೂರಿಯಾಗಿ ನಿರ್ಮಾಣವಾಗಿರುವ, ಪ್ರಕಾಶ್ ವೀರ್ ಕಥೆ, ಚಿತ್ರಕಥೆ ಬರೆದು ನಿರ್ದೇಶಿಸಿರುವ ಹಾಗೂ ಚಾಲೆಂಜಿಂಗ್ ಸ್ಟಾರ್ ದರ್ಶನ್ ನಾಯಕರಾಗಿ ನಟಿಸಿರುವ "ದಿ ಡೆವಿಲ್" ಚಿತ್ರ ಡಿಸೆಂಬರ್ 11 ರಂದು ರಾಜ್ಯಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗಿದ್ದು ಚಾಲೆಂಜಿಂಗ್ ಸ್ಟಾರ್ ದರ್ಶನ್ ಚಿತ್ರದಲ್ಲಿ ಅಬ್ಬರಿಸಿದ್ದಾರೆ. ಅಭಿಮಾನಿಗಳಂತು ಸಂಭ್ರಮಿಸಿದ್ದಾರೆ. ನಾಯಕಿಯಾಗಿ ರಚನ ರೈ ಅಭಿನಯಿಸಿದ್ದಾರೆ. ಸುಧಾಕರ್. ಎಸ್. ರಾಜ್ ಛಾಯಾಗ್ರಹಣ, ಬಿ. ಅಜನೀಶ್ ಲೋಕನಾಥ್ ಸಂಗೀತ ನಿರ್ದೇಶನ, ಹರೀಶ್ ಕೊಮ್ಮೆ ಸಂಕಲನ, ಕಾಂತರಾಜ್ ಸಂಭಾಷಣೆ, ಮೋಹನ್ ಬಿಕೆರೆ ಕಲಾ ನಿರ್ದೇಶನ, ರಾಮ್ ಲಕ್ಷ್ಮಣ್ ಅವರ ಸಾಹಸ ನಿರ್ದೇಶನವಿದೆ. ತಶ್ವಿನಿ ವೀರ್ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯ ನಿರ್ವಹಿಸಿದ್ದಾರೆ.

## 'ವಾದಿರಾಜ ವಾಲಗ ಮಂಡಳಿ'ಗೆ ಭರದಿಂದ ಚಿತ್ರೀಕರಣ



ಎಂಎನ್‌ಆರ್ ಪ್ರೊಡಕ್ಷನ್ ಸಂಸ್ಥೆಯ ಕನ್ನಡ ಸಿನಿಮಾ 'ವಾದಿರಾಜ ವಾಲಗ ಮಂಡಳಿ' ಚಿತ್ರ ಬ್ರಹ್ಮಾವರ ತೆಂಕು ಮನೆಯಲ್ಲಿ ನಾಲ್ಕನೇ ದಿನದ ಚಿತ್ರೀಕರಣ ನಡೆಯುತ್ತಿದ್ದು ಮೇ ತಿಂಗಳಿನಲ್ಲಿ ತೆರೆ ಕಾಣುವ ಸಾಧ್ಯತೆ ಇದೆ ಎಂದು ಚಿತ್ರದ ನಿರ್ಮಾಪಕರಾದ ಡಾ।ಎಮ್ ಎನ್ ರಾಜೇಂದ್ರ ಕುಮಾರ್ ಹೇಳಿದರು. ಅವರು ಬ್ರಹ್ಮಾವರದ ತೆಂಕು ಮನೆಯಲ್ಲಿ ಚಿತ್ರದಲ್ಲಿ ಮೆಹಂದಿ ಚಿತ್ರೀಕರಣದಲ್ಲಿ ಭಾಗವಹಿಸಿ ಮಾತನಾಡಿದರು. ಎಂಎನ್‌ಆರ್ ಪ್ರೊಡಕ್ಷನ್ ಸಂಸ್ಥೆಯ ಮೂರನೇ ಸಿನೆಮಾ ಇದಾಗಿದ್ದು, ಸುಮಾರು 50 ದಿನಗಳ ಕಾಲ ಚಿತ್ರೀಕರಣ ನಡೆದು ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ಮಾರ್ಚ್ ವೇಳೆಗೆ ನಡೆದು ಮೇ ತಿಂಗಳಿನಲ್ಲಿ ತೆರೆ ಕಾಣಲಿದೆ. ಯುವ ನಿರ್ದೇಶಕ ಶಶಿರಾಜ್ ಕಾವೂರು ನಿರ್ದೇಶನದ "ವಾದಿರಾಜ ವಾಲಗ ಮಂಡಳಿ" ಸಿನೆಮಾ ಉತ್ತಮ ಕಥಾ ಹಂದರ ಹೊಂದಿದ್ದು, ಸಂಪೂರ್ಣ ಹಾಸ್ಯ ಪ್ರಧಾನ, ಸಮಾಜಕ್ಕೆ ಒಳ್ಳೆಯ ಸಂದೇಶವನ್ನು ನೀಡುವ ಸಿನಿಮಾವಾಗಿದೆ.

## ಸೂರಿ ಅಣ್ಣ ಚಿತ್ರದ ಸಾಂಗ್ ಬಿಡುಗಡೆ..



ಈ ಹಿಂದೆ ಮಾರಿಗುಡ್ಡದ ಗಡ್ಡಧಾರಿಗಳು ಎಂಬ ಚಿತ್ರವನ್ನು ನಿರ್ಮಾಣ ಮಾಡಿದ್ದ ಸಲಗ ಖ್ಯಾತಿಯ ಸೂರಿ ಅಣ್ಣ(ದಿನೇಶ್) ಇದೀಗ ಮತ್ತೊಂದು ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಆ ಚಿತ್ರದ ಹೆಸರೂ ಸಹ ಸೂರಿ ಅಣ್ಣ. ನಾಯಕನಾಗಿ ನಟಿಸುವ ಜೊತೆಗೆ ನಿರ್ದೇಶನ ಕೂಡ ಮಾಡಿದ್ದಾರೆ. ಬಿಡುಗಡೆಗೆ ಸಿದ್ದವಾಗಿರುವ ಈ ಚಿತ್ರದ ಹಾಡೊಂದರ ಬಿಡುಗಡೆ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು. 'ನೀ ನನ್ನ ದೇವತೆ' ಎಂಬ ಸುಂದರ ಸಾಹಿತ್ಯ ಒಳಗೊಂಡ ಈ ಗೀತೆಗೆ ಕೆ.ಎಂ.ಇಂದ್ರ ಸಂಗೀತ ಸಂಯೋಜನೆ ಮಾಡಿದ್ದಾರೆ. ವೇಲು ಅವರ ಲಹರಿ ಆಡಿಯೋ ಮೂಲಕ ಈ ಹಾಡು ಬಿಡುಗಡೆಯಾಗಿದೆ. ವೇದಿಕೆಯಲ್ಲಿ ನಾಯಕ, ನಿರ್ದೇಶಕ ಸೂರಿ ಅಣ್ಣ, ನಾಯಕಿ ಸಂಭ್ರಮಶ್ರೀ, ಉಪಸ್ಥಿತರಿದ್ದರು. ಈ ಚಿತ್ರದ ಟ್ರೈಲರ್ ಜ.24 ರಂದು ಸೂರಿ ಅಣ್ಣ ಹುಟ್ಟುಹಬ್ಬದಂದು ಬಿಡುಗಡೆ ಮಾಡಲಿದ್ದಾರೆ.









KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021